# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –267 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:17–05–2025 ಶನಿವಾರ | ಪುಟ: 4 | ಬೆಲೆ : ರೂ.2–00

Volume - 02 Issue - 267 | RNI No: KARKAN/2023/88462 | KA/SK/CTA-874/2024-2026 | Chitradurga | Date: 17-05-2025 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ತ್ವರಿತವಾಗಿ ಮನೆಗಳ ನಿರ್ಮಾಣ ಕಾರ್ಯ ಪೂರ್ಣಗೊಳಿಸಲು ಶಾಸಕರ ತಾಕೀತು 2

ಉಚಿತ ಹೆರಿಗೆ ಮಾಡಿಸುವಲ್ಲಿ ಸಫಲರಾದ ತಳುಕಿನ ತಿಮ್ಮಕ್ಕಗೆ ಶಾರದಾಶ್ರಮದ ನೆರವು 3

ಕಾರ್ಮಿಕರಿಗೆ ಸೌಲಭ್ಯ ನೀಡದೆ ವಂಚಿಸುತ್ತಿರುವ ಸರ್ಕಾರ ವಿರುದ್ಧ ಪ್ರತಿಭಟನೆ 4



ಸುದ್ದಿ, ಜಾಹಿರಾತಿಗೆ
9686622252


## ಫಾಸ್ಟ್ ನ್ಯೂಸ್

### ಸಚಿವ ವಿ. ಸೋಮಣ್ಣ ಪರಿಷ್ಕೃತ ಪ್ರವಾಸ

» ಚಿತ್ರದುರ್ಗ

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರು ಮೇ. 17 ರಂದು ಕೈಗೊಂಡಿದ್ದ ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಪರಿಷ್ಕೃತಗೊಂಡಿದೆ. ಪರಿಷ್ಕೃತ ಪ್ರವಾಸ ಪಟ್ಟಿಯನ್ವಯ ಸಚಿವ ವಿ. ಸೋಮಣ್ಣ ಅವರು ಅಂದು ಬೆಳಿಗ್ಗೆ ತುಮಕೂರು ಜಿಲ್ಲೆಯ ತಿಮ್ಮರಾಜನಹಳ್ಳಿಯಿಂದ ಹೊರಟು, ಮಧ್ಯಾಹ್ನ 12 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸುವರು. ಬಳಿಕ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ತುಮಕೂರು–ಚಿತ್ರದುರ್ಗ–ದಾವಣಗೆರೆ ನೂತನ ರೈಲ್ವೆ ಮಾರ್ಗದ ಕಾಮಗಾರಿಯ ಪ್ರಗತಿ ಕುರಿತಂತೆ ಪರಿಶೀಲನಾ ಸಭೆ ನಡೆಸುವರು. ಮಧ್ಯಾಹ್ನ 02 ಗಂಟೆಗೆ ಚಿತ್ರದುರ್ಗ ನಗರದಲ್ಲಿನ ಮೆದೆಹಳ್ಳಿ ರಸ್ತೆ ರೈಲ್ವೆ ಕೆಳಸೇತುವೆ, ರೈಲ್ವೆ ಲೆವೆಲ್ ಕ್ರಾಸಿಂಗ್ ಸಂಖ್ಯೆ 22 ಹಾಗೂ ಚಿತ್ರದುರ್ಗದ ರೈಲ್ವೆ ನಿಲ್ದಾಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುವರು. ಸಚಿವರು ಅದೇ ದಿನ ಮಧ್ಯಾಹ್ನ 03 ಗಂಟೆಗೆ ಬೆಂಗಳೂರಿಗೆ ಪ್ರಯಾಣ ಬೆಳೆಸುವರು.

### ಮೇ.17 ಮತ್ತು 18ರಂದು ಸಚಿವ ಸುಧಾಕರ್ ಪ್ರವಾಸ

» ಚಿತ್ರದುರ್ಗ

ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ಇದೇ ಮೇ.17 ಮತ್ತು 18ರಂದು ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಮೇ.17ರಂದು ಬೆಳಿಗ್ಗೆ 10ಕ್ಕೆ ಚಳ್ಳಕೆರೆ ವೆಂಕಟೇಶ್ವರ ನಗರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ತುರುವನೂರು ರಸ್ತೆಯ ಬೆವಿಕಂ ಹೊಸ ಕಾಲೋನಿಯಲ್ಲಿ ನೂತನವಾಗಿ ನಿರ್ಮಿಸಿರುವ ಕಾರ್ಯ ಮತ್ತು ಪಾಲನಾ ಘಟಕ–3 ಮತ್ತು ಘಟಕ–4ರ ಕಚೇರಿ ಉದ್ಘಾಟನೆ ನೆರವೇರಿಸುವರು. ಮಧ್ಯಾಹ್ನ 12ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಅವರೊಂದಿಗೆ ತುಮಕೂರು–ಚಿತ್ರದುರ್ಗ–ದಾವಣಗೆರೆ ಹೊಸ ರೈಲು ಮಾರ್ಗ ಯೋಜನೆಗೆ ಸಂಬಂಧಿಸಿದ ಸಭೆಯಲ್ಲಿ ಭಾಗವಹಿಸುವರು. ಮಧ್ಯಾಹ್ನ 1ಕ್ಕೆ ಹಿರಿಯೂರು ಸಾರ್ವಜನಿಕ ಆಸ್ಪತ್ರೆಯಲ್ಲಿ 2025–26ನೇ ಸಾಲಿನ ರಾಷ್ಟ್ರೀಯ ಡೆಂಗ್ಯೂ ದಿನ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 1.30ಕ್ಕೆ ಹಿರಿಯೂರು ನಗರ ವಾರ್ಡ್ ನಂ.22ರಲ್ಲಿ ಮರು ಡಾಂಬರೀಕರಣ ಕಾಮಗಾರಿಗೆ ಚಾಲನೆ. ಮಧ್ಯಾಹ್ನ 2.30ಕ್ಕೆ ರಂಗನಾಥಪುರದಲ್ಲಿ ರೂ.50 ಲಕ್ಷಗಳ ಪಶು ಚಿಕಿತ್ಸಾ ಕೇಂದ್ರ ಕಟ್ಟಡ ಕಾಮಗಾರಿ ಶಂಕುಸ್ಥಾಪನೆ, ಮಧ್ಯಾಹ್ನ 3 ರಿಂದ ಸಂಜೆ 6ಕ್ಕೆ ಹಿರಿಯೂರು ಮತ್ತು ಚಿತ್ರದುರ್ಗ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಚಳ್ಳಕೆರೆಯಲ್ಲಿ ವಾಸ್ತವ್ಯ ಮಾಡುವರು. ಮೇ.18ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ರವರೆಗೆ ಹಿರಿಯೂರು ಹಾಗೂ ಚಿತ್ರದುರ್ಗ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 2ಕ್ಕೆ ರಂಗೇನಹಳ್ಳಿಯಲ್ಲಿ ರೂ.50 ಲಕ್ಷಗಳ ಪಶು ಚಿಕಿತ್ಸಾ ಕೇಂದ್ರ ಕಟ್ಟಡ ಕಾಮಕಾರಿ ಶಂಕುಸ್ಥಾಪನೆ ನೆರವೇರಿಸುವರು. ಮಧ್ಯಾಹ್ನ 3 ರಿಂದ ಸಂಜೆ 6 ರವರೆಗೆ ಹಿರಿಯೂರು ಹಾಗೂ ಚಿತ್ರದುರ್ಗ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು.

### ರಿಯಾಯಿತಿ ದರದಲ್ಲಿ ಗೋದಾಮುಗಳ ಬಾಡಿಗೆ

» ದಾವಣಗೆರೆ

ರಾಜ್ಯ ಉಗ್ರಾಣ ನಿಗಮವು ಸರ್ಕಾರದ ಅಂಗ ಸಂಸ್ಥೆಯಾಗಿದ್ದು, ರಾಜ್ಯಾದ್ಯಂತ 161 ಉಗ್ರಾಣ ಕೇಂದ್ರಗಳ ಮೂಲಕ ರೈತರಿಗೆ, ರೈತ ಉತ್ಪಾದಕ ಸಂಸ್ಥೆ, ಸರ್ಕಾರಿ ಸಂಸ್ಥೆಗಳಿಗೆ ಹಾಗೂ ವ್ಯಾಪಾರಸ್ಥರಿಗೆ, ಇತರೆ ಸಂಘ ಸಂಸ್ಥೆಗಳಿಗೆ ರಿಯಾಯಿತಿ ದರದಲ್ಲಿ ಗೋದಾಮುಗಳನ್ನು ಬಾಡಿಗೆಗೆ ನೀಡಲು ಇಚ್ಚಿಸಿದ್ದು, ಕೃಷಿ ಉತ್ಪನ್ನಗಳನ್ನು ವೈಜ್ಞಾನಿಕ ಸರಕು ಸಂಗ್ರಹಣಾ ಸೌಲಭ್ಯ ಒದಗಿಸುತ್ತಿದೆ. ಆಸಕ್ತರು ಈ ಅವಕಾಶವನ್ನು ಸದುಪಯೋಗಪಡೆದುಕೊಳ್ಳಬಹುದು ಎಂದು ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಪ್ರಾದೇಶಿಕ ವ್ಯವಸ್ಥಾಪಕರು ತಿಳಿಸಿದ್ದಾರೆ. ಅದರಂತೆ ಜಿಲ್ಲೆಯ ಚನ್ನಗಿರಿ ತಾಲ್ಲೂಕಿನ ಸಾಗರಪೇಟೆಯಲ್ಲಿ 3 ಗೋದಾಮುಗಳನ್ನು ಸ್ಥಾಪಿಸಿದ್ದು, ಒಟ್ಟಾರೆ 7 ಸಾವಿರ ಮೆಟ್ರಿಕ್ ಟನ್ ಸಾಮರ್ಥ್ಯ ಮತ್ತು ಹೊಸಹಳ್ಳಿಯಲ್ಲಿ 2 ಗೋದಾಮುಗಳನ್ನು ಸ್ಥಾಪಿಸಿದ್ದು, ಒಟ್ಟಾರೆ 10108 ಮೆಟ್ರಿಕ್ ಟನ್ ಸಾಮರ್ಥ್ಯದ ಗೋದಾಮುಗಳನ್ನು ನಿರ್ಮಿಸಲಾಗದೆ. ಆಸಕ್ತಿಯುಳ್ಳವರು ಕರ್ನಾಟಕ ರಾಜ್ಯ ಉಗ್ರಾಣ ನಿಗಮ ಪ್ರಾದೇಶಿಕ ವ್ಯವಸ್ಥಾಪಕರು ದೂ.ಸಂಖ್ಯೆ 7760966953 ಗೆ ಸಂಪರ್ಕಿಸಿ.

# ಬದುಕಿಗೆ ಆಧಾರವಾದ ಗೃಹಲಕ್ಷ್ಮಿ


## ಮನೆ ಯಜಮಾನಿಯರ ಸ್ವಾವಲಂಬಿ ಜೀವನಕ್ಕೆ ವರದಾನ –ಚಿತ್ರದುರ್ಗ ಜಿಲ್ಲೆಯಲ್ಲಿ ಈವರೆಗೆ 1,246 ಕೋಟಿ ರೂ. ಹಣ ಪಾವತಿ

» ಚಿತ್ರದುರ್ಗ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯು ಪ್ರತಿ ಮನೆಯ ಯಜಮಾನಿಗೆ ನೆಮ್ಮದಿಯ ಬದುಕು ರೂಪಿಸುವಲ್ಲಿ ನೆರವಾಗಿದೆ. ಬಹಳಷ್ಟು ಮಹಿಳೆಯರ ಬದುಕನ್ನು ಗೃಹಲಕ್ಷ್ಮಿ ಯೋಜನೆ ಕಟ್ಟಿಕೊಟ್ಟಿದ್ದು, ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣದಲ್ಲಿ ಗೃಹಲಕ್ಷ್ಮಿ ತನ್ನದೇ ಆದ ಕೊಡುಗೆಯನ್ನು ನೀಡಿದೆ. ಜಿಲ್ಲೆಯಲ್ಲಿ ಯೋಜನೆಯಡಿ ಈವರೆಗೆ 1246.26 ಕೋಟಿ ರೂ. ಹಣ ಮನೆಯ ಯಜಮಾನಿಯರ ಕೈ ಸೇರಿದೆ.

ಸರ್ಕಾರದ ಗ್ಯಾರಂಟಿ ಯೋಜನೆಗಳ ಪೈಕಿ ಗೃಹಲಕ್ಷ್ಮಿ ಯೋಜನೆಯು ಅತ್ಯಂತ ಮಹತ್ವಾಕಾಂಕ್ಷೆಯ ಯೋಜನೆಯಾಗಿದ್ದು, ಮಹಿಳೆಯರ ಸ್ವಾವಲಂಬಿ ಜೀವನಕ್ಕೆ ಗೃಹಲಕ್ಷ್ಮಿ ಯೋಜನೆ ವರದಾನವಾಗಿದೆ. ಮಕ್ಕಳ ಶಾಲಾ ಶುಲ್ಕ, ವೈದ್ಯಕೀಯ ಖರ್ಚು, ದಿನಸಿ ಖರೀದಿ ಹೀಗೆ ನಾನಾ ರೀತಿಯಲ್ಲಿ ಗೃಹಲಕ್ಷ್ಮಿ ಯೋಜನೆಯಡಿಯಲ್ಲಿ ಮನೆಯ ಯಜಮಾನಿಗೆ ಪ್ರತಿ ತಿಂಗಳು ನೀಡುವ ರೂ.2,000 ಸದ್ಬಳಕೆಯಾಗುತ್ತಿದೆ. ಇದರೊಂದಿಗೆ ಕೆಲ ಮಹಿಳೆಯರು ಸ್ವಂತ ವ್ಯಾಪಾರ, ಹೊಲಿಗೆ ಯಂತ್ರ ಖರೀದಿ, ಬಳೆ ಅಂಗಡಿ ವ್ಯಾಪಾರ, ಬ್ಯೂಟಿ ಪಾರ್ಲರ್ ವೃತ್ತಿ ಅಲ್ಲದೆ ಕೆಲವರು ಹೈನುಗಾರಿಕೆಯನ್ನು ಆರಂಭಿಸಿ, ಗೃಹಲಕ್ಷ್ಮೀ ಯೋಜನೆಯ ಸದುಪಯೋಗ ಪಡೆದುಕೊಂಡಿದ್ದಾರೆ.

ಗೃಹಲಕ್ಷ್ಮಿ ಯೋಜನೆಯಡಿ ನೋಂದಣಿಯಾದ ಅರ್ಹ ಫಲಾನುಭವಿಯ ಖಾತೆಗ ರೂ.2,000/–ಗಳನ್ನು ಡಿಬಿಟಿ ಮೂಲಕ ವರ್ಗಾವಣೆ ಮಾಡಲಾಗುತ್ತಿದೆ.




ನೋಂದಣಿ ಪ್ರಕ್ರಿಯೆಗೆ ಕೊನೆಯ ದಿನಾಂಕವಿರುವುದಿಲ್ಲ. ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ವಿತರಿಸುವ ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆಯರು ಈ ಯೋಜನೆಯ ಅರ್ಹ ಫಲಾನುಭವಿಯಾಗಿರುತ್ತಾರೆ. ಗೃಹಲಕ್ಷ್ಮಿ ಯೋಜನೆಯ ಸೌಲಭ್ಯವನ್ನು ಲಿಂಗತ್ವ ಅಲ್ಪಸಂಖ್ಯಾತರಿಗೂ ಸಹ ವಿಸ್ತರಿಸಲಾಗಿದೆ.

**ಸ್ತ್ರೀ ಸ್ವಾವಲಂಬನೆಯತ್ತ ಒಂದು ದಿಟ್ಟ ಹೆಜ್ಜೆ:** ರಾಜ್ಯದ ಪ್ರತಿ ಬಡವರ ಮನೆಯ ಕುಟುಂಬದ ಯಜಮಾನಿಗೆ ಆರ್ಥಿಕವಾಗಿ, ಸಾಮಾಜಿಕವಾಗಿ ಸಶಕ್ತರನ್ನಾಗಿ ಮಾಡಲು ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಲ್ಲೊಂದಾದ ಗೃಹಲಕ್ಷ್ಮಿ ಯೋಜನೆಯು ಜಾರಿಗೊಂಡು ರಾಜ್ಯದ ಕುಟುಂಬಗಳ ಮನೆ ಯಜಮಾನಿಯ ಮೊಗದಲ್ಲಿ ಮಂದಹಾಸ ಮೂಡಿಸಿದೆ. ರಾಜ್ಯದ ಮಹಿಳೆಯರ ಸಬಲೀಕರಣಕ್ಕಾಗಿ ರಾಜ್ಯ ಸರ್ಕಾರವು ಗೃಹಲಕ್ಷ್ಮಿಯನ್ನು ರೂಪಿಸಿದೆ.

ಮಹಿಳೆಯರ ಆರ್ಥಿಕ ಸಬಲೀಕರಣದ ದೃಷ್ಟಿಯಿಂದ ಈ ಯೋಜನೆಯನ್ನು ಜಾರಿಗೆ ತರಲಾಗಿದೆ. ಕುಟುಂಬದ ನಿರ್ವಹಣೆಯಲ್ಲಿ ಮನೆ ಯಜಮಾನಿಯ ಪಾತ್ರ ಬಹುದೊಡ್ಡದು. ಹೀಗಾಗಿ ಮನೆಯ ನಿರ್ವಹಣೆಗೆ ಅನುಕೂಲವಾಗಲೆಂದು ರಾಜ್ಯ ಸರ್ಕಾರವು ಕುಟುಂಬದ ಯಜಮಾನಿಯ ಖಾತೆಗೆ ಪ್ರತಿ ತಿಂಗಳು ರೂ.2.000 ಜಮಾ ಮಾಡಲು ಯೋಜನೆ ರೂಪಿಸಿ ಅನುಷ್ಠಾನ ಮಾಡಿದೆ.

ಪ್ರತಿ ಕುಟುಂಬದ ನಿರ್ವಹಣೆಯಲ್ಲಿ ಮನೆ ಒಡತಿಯ ಪಾತ್ರ ಬಹು ಮುಖ್ಯವಾಗಿರುತ್ತದೆ. ಹಾಗಾಗಿ ಮನೆ ಯಜಮಾನಿ ಆರ್ಥಿಕವಾಗಿ ಸಬಲೀಕರಣಗೊಂಡಲ್ಲಿ ಕುಟುಂಬದ ನಿರ್ವಹಣಿ ಉತ್ತಮ ಗುಣಮಟ್ಟದಲ್ಲಿರುತ್ತದೆ.

ಹೀಗಾಗಿ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ.2000 ಗಳನ್ನು ನೀಡುವ ಗೃಹಲಕ್ಷ್ಮಿ ಯೋಜನೆ ರೂಪಿಸಲಾಗಿದೆ. ಈ ಯೋಜನೆಗೆ ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ ಒನ್ ಮತ್ತು ಸೇವಾಸಿಂಧು ಪೋರ್ಟಲ್ ಮೂಲಕ ಉಚಿತವಾಗಿ ನೋಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಜಿಲ್ಲೆಯಲ್ಲಿ ಕಳೆದ 2023 ರ ಆಗಸ್ಟ್ 30ರಂದು ರಾಜ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರ ನೇತೃತ್ವದಲ್ಲಿ ಜರುಗಿದ ಸಮಾರಂಭದಲ್ಲಿ ಗೃಹಲಕ್ಷ್ಮಿ ಯೋಜನೆಗೆ ಅಧಿಕೃತವಾಗಿ ಚಾಲನೆ ನೀಡಲಾಗಿತ್ತು. ಇದೀಗ ಈ ಯೋಜನೆಯ ಸದ್ವಿನಿಯೋಗದ ಪರಿಣಾಮಗಳು ಜಿಲ್ಲೆಯಲ್ಲಿ ಗೋಚರಿಸಲಾರಂಭಿಸಿದ್ದು, ಮಹಿಳೆಯರ ಪಾಲಿಗೆ ಈ ಯೋಜನೆ ನಿಜಕ್ಕೂ ವರದಾನವಾಗಿದೆ.

**ರೂ.1246.26 ಕೋಟಿ ಜಮೆ:** ಗೃಹಲಕ್ಷ್ಮಿ ಯೋಜನೆ ಜಾರಿಯಾದ 2023ರ ಆಗಸ್ಟ್ ಮಾಹೆಯಿಂದ ಈವರೆಗೆ ಚಿತ್ರದುರ್ಗ ಜಿಲ್ಲೆಯಲ್ಲಿ 4 ಲಕ್ಷಕ್ಕೂ ಹೆಚ್ಚು ಫಲಾನುಭವಿಗಳಿಗೆ ಒಟ್ಟು 1246.26 ಕೋಟಿ ರೂ. ಗಳನ್ನು ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ತಿಳಿಸಿದ್ದಾರೆ.

> ನಾನು ಗೃಹಲಕ್ಷ್ಮಿ ಯೋಜನೆ ಪ್ರಾರಂಭವಾದಾಗಿನಿಂದ ನನಗೆ ಪ್ರತಿ ತಿಂಗಳು 2000 ರೂ. ಹಣ ನನ್ನ ಬ್ಯಾಂಕ್ ಖಾತೆಗೆ ಜಮಾ ಆಗಿದೆ. ಇನ್ನೊಬ್ಬರ ಮುಂದೆ ಕೈಚಾಚದೆ, ಜೀವನ ರೂಪಿಸಿಕೊಳ್ಳಲು ಗೃಹಲಕ್ಷ್ಮಿ ಯೋಜನೆಯಲ್ಲಿ ಬಂದ ಹಣದಿಂದ ಕುರಿ ವ್ಯಾಪಾರ ಮಾಡಿದ್ದೇನೆ. ಇದರಿಂದ ನನಗೆ ಸಾವಿರಾರು ರೂಪಾಯಿ ಲಾಭ ಬರುತ್ತಿದೆ. ಹೀಗಾಗಿ ಮತ್ತಷ್ಟು ಕುರಿಗಳನ್ನು ಖರೀದಿಸಿ, ವ್ಯಾಪಾರ ಮುಂದುವರೆಸಲು ಉದ್ದೇಶಿಸಿದ್ದೇನೆ. ನನಗೆ ತುಂಬಾ ಕಾಲು ನೋವು ಇದೆ. ಆಸ್ಪತ್ರೆಗೆ ತೋರಿಸಿಕೊಳ್ಳಲು, ಆರೋಗ್ಯ ಸಮಸ್ಯೆಗೆ ಮಾತ್ರೆ ಮತ್ತು ಇಂಜೆಕ್ಷನ್ ತೆಗೆದುಕೊಳ್ಳಲು ನನ್ನ ಹತ್ತಿರ ಯಾವುದೇ ಹಣ ಇರುತ್ತಿರಲಿಲ್ಲ. ಜೀವನ ನಡೆಸೋದು ತುಂಬಾನೆ ಕಷ್ಟ ಆಗ್ತಿತ್ತು. ಗೃಹಲಕ್ಷ್ಮಿ ಯೋಜನೆಯಿಂದ ಪ್ರತಿ ತಿಂಗಳು ಬರುವ 2 ಸಾವಿರ ರೂ. ಹಣದಿಂದ ನನಗೆ ಔಷಧಿ ಖರೀದಿಸಲು, ಆಸ್ಪತ್ರೆ ಖರ್ಚಿಗೆ ಅನುಕೂಲವಾಗಿದೆ. ನನ್ನ ಆರೋಗ್ಯ ಈಗ ಸುಧಾರಿಸುತ್ತಿದ್ದು, ದಯವಿಟ್ಟು ಈ ಯೋಜನೆಯನ್ನು ನಿಲ್ಲಿಸಬೇಡಿ. ಈ ಯೋಜನೆಯಿಂದ ನಮ್ಮಂತಹ ಬಡವರಿಗೆ ಸಹಾಯವಾಗುತ್ತಿದೆ.
>
> » **ದೇವೀರಮ್ಮ, ಎಂ.ಜಿ. ನಗರ, ಚಿತ್ರದುರ್ಗ ತಾಲ್ಲೂಕು**

> ನಾನು ಗೃಹಲಕ್ಷ್ಮೀ ಯೋಜನೆಯಡಿ ಪ್ರತಿ ತಿಂಗಳು 2 ಸಾವಿರ ರೂ. ನಂತ ಹಣ ಪಡೆಯುತ್ತಿದ್ದೇನೆ. ಈ ಯೋಜನೆ ನಮ್ಮ ಅತ್ಯಂತ ಮಹತ್ವಕಾಂಕ್ಷೆ ಈಡೇರಿಸಿದ ಯೋಜನೆಯಾಗಿದೆ. ಈ ಮೊದಲು ಜೀವನ ನಿರ್ವಹಣೆ ಕಷ್ಟಕರವಾಗಿತ್ತು. ಗೃಹಲಕ್ಷ್ಮಿ ಯೋಜನೆ ಜಾರಿಗೆ ಬಂದಾಗಿನಿಂದ, ಆರ್ಥಕವಾಗಿ ಸಬಲರಾಗುತ್ತಿದ್ದೇವೆ. ನನಗೆ ಬಂದ ಹಣದಿಂದ ಬಟ್ಟೆ ಹಾಗೂ ಬಳೆ ವ್ಯಾಪಾರ ಮಾಡುತ್ತಿದ್ದೇನೆ. ಅಲ್ಲದೆ ಮನೆಯಲ್ಲಿಯೇ ಅಣಬೆ ತಯಾರಿಸಿ ಮಾರಾಟ ಮಾಡುತ್ತಿದ್ದು, ಒಳ್ಳೆಯ ಲಾಭವೂ ಬರುತ್ತಿದೆ. ನನ್ನ ಕುಟುಂಬ ಚೆನ್ನಾಗಿ ಸಾಗುತ್ತಿದೆ. ನಮ್ಮಂತಹ ಬಡ ಮಹಿಳೆಯರಿಗೆ ಆರ್ಥಿಕ ಸಬಲೀಕರಣ ತಂದುಕೊಡುವಲ್ಲಿ ಸರ್ಕಾರವು ತುಂಬಾ ಅನುಕೂಲ ಮಾಡಿಕೊಟ್ಟಿದೆ. ಈ ಯೋಜನೆಯನ್ನು ಇದೇ ರೀತಿ ಮುಂದುವರೆಸಬೇಕೆಂದು ಸರ್ಕಾರಕ್ಕೆ ಕೇಳಿಕೊಳ್ಳುತ್ತೇನೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಧನ್ಯವಾದ ಸಲ್ಲಿಸುತ್ತೇನೆ.
>
> » **ನಿರ್ಮಲ ವಿಜಯಕುಮಾರ್, ಮುದ್ದಾಪುರ ಗ್ರಾಮ, ಚಿತ್ರದುರ್ಗ ತಾಲ್ಲೂಕು**

> ನಾನು ಗೃಹಲಕ್ಷ್ಮಿ ಯೋಜನೆಗೆ ಫಲಾನುಭವಿಯಾಗಿ ನೊಂದಣಿಯಾಗಿದ್ದು, ಯೋಜನೆಯ ಪ್ರಾರಂಭದಿಂದಲೂ ನಾನು ಪ್ರತಿ ತಿಂಗಳು 2000 ರೂ. ಪಡೆಯುತ್ತಿದ್ದೇನೆ. ನನ್ನ ಪತಿಯ ಆದಾಯ ನಮ್ಮ ಸಂಸಾರ ಸಾಗಿಸಲು ಸಾಕಾಗುತ್ತಿರಲಿಲ್ಲ. ಗೃಹಲಕ್ಷ್ಮಿ ಯೋಜನೆಯಡಿ ನೀಡಿದ ಹಣದಿಂದ ನಾನು ಬಂಡಿಯಲ್ಲಿ ತರಕಾರಿ ವ್ಯಾಪಾರ ಪ್ರಾರಂಭಿಸಿದ್ದು, ಒಳ್ಳೆಯ ಲಾಭಾಂಶ ಸಿಗ್ತಾ ಇದೆ. ಇದು ಮನೆಯ ಖರ್ಚಿಗೆ, ಮಕ್ಕಳ ವಿದ್ಯಾಭ್ಯಾಸಕ್ಕೆ ಸಹಾಯಕವಾಗಿದೆ. ಇದರ ಜೊತೆಗೆ ನನ್ನ ಮಗಳ ಹೆಸರಿನಲ್ಲಿ ಪ್ರತಿ ತಿಂಗಳು 500 ರೂ. ಸುಕನ್ಯ ಸಮೃದ್ಧಿ ಯೋಜನೆಯಡಿ ಠೇವಣಿ ಇಟ್ಟಿದ್ದು, ಇದು ನನ್ನ ಮಗಳ ಭವಿಷ್ಯ ಭದ್ರಪಡಿಸಲು ನೆರವಾಗಿದೆ.
>
> » **ಲತಾ, ಮೆದೆಹಳ್ಳಿ, ಚಿತ್ರದುರ್ಗ ತಾಲ್ಲೂಕು**

## ಪ್ರಮುಖ ಸುದ್ದಿ

# ಆಪರೇಷನ್ ಸಿಂಧೂರ: ಇಂದು ಬಿಜೆಪಿಯಿಂದ ತಿರಂಗಯಾತ್ರೆ

» ಚಿತ್ರದುರ್ಗ

ಆಪರೇಷನ್ ಸಿಂಧೂರ ಯೋಧ ನಮನ ರಾಷ್ಟ್ರರಕ್ಷಣೆಗಾಗಿ ಚಿತ್ರದುರ್ಗದ ನಾಗರಿಕರು ತಿರಂಗ ಯಾತ್ರೆಯನ್ನು ನಾಗರೀಕರ ವೇದಿಕೆವತಿಯಿಂದ ಮೇ.17 ರಂದು ಚಿತ್ರದುರ್ಗದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ವಿಶ್ವ ಹಿಂದೂ ಪರಿಷತ್ ಮುಂಖಡರಾದ ರುದ್ರೇಶ್ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಪರೇಷನ್ ಸಿಂಧೂರ–ಯೋಧ ನಮನ ನಮ್ಮ ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪಾಕಿಸ್ತಾನ ಪ್ರೇರಿತ ಜಿಹಾದಿ ಭಯೋತ್ಪಾದಕರಿಂದ ಅಮಾಯಕ ಹಿಂದೂಗಳ ಹತ್ಯಾಕಾಂಡದ ನಂತರ ನಡೆದ ಭಾರತದ ಸೇನೆಯ ಅಪರೇಷನ್ ಸಿಂಧೂರ ಕಾರ್ಯಚರಣೆಯು ಉಗ್ರಗಾಮಿಗಳ ಹೆಡೆಮುರಿ ಕಟ್ಟಿದ್ದಲ್ಲದೇ, ಭ್ರಷ್ಟ ಪಾಕಿಸ್ತಾನದ ಜಂಘಾಬಲವನ್ನೇ ಕುಸಿಯುವಂತೆ ಮಾಡಿದೆ. ಪಾಕಿಸ್ತಾನದ ಭೂಪ್ರದೇಶದೊಳಗಿನ 9 ಪ್ರಮುಖ ಭಯೋತ್ಪಾದಕ ಶಿಬಿರಗಳು ಮತ್ತು ಮುಖ್ಯ ಕಛೇರಿಗಳನ್ನು ಸಂಪೂರ್ಣವಾಗಿ ನಾಶಮಾಡಿತು. ನಮ್ಮ ಭಾರತೀಯ ಸಧೃಡ ನಾಯಕತ್ವ ಮತ್ತು ಸೈನಿಕರ ದಿಟ್ಟ ಉತ್ತರದ ಪರಿಣಾಮ ಭಾರತದ ಶತ್ರುಗಳಿಗೆ ನಡುಕ, ಭಯೋತ್ಪಾದಕರಿಗೆ ಭಯ



ಉಂಟಾಗಿದ್ದು, ಜಾಗತಿಕ ಮಟ್ಟದಲ್ಲಿಯೂ ಭಾರತದ ಸ್ಥಾನಮಾನ ಹೆಚ್ಚಿದೆ. ಭಾರತವು ವಿಶ್ವಕ್ಕೆ ಉಗ್ರತ್ವದ ನಿರ್ಮೂಲನೆಯ ಸ್ಪಷ್ಟ ಸಂದೇಶ ನೀಡಿದೆ ಎಂದರು. ಪ್ರತಿಕೂಲ ಸಮಯದಲ್ಲಿ ಧೃಡ ನಿರ್ಧಾರ ಕೈಗೊಂಡು, ನಾಗರಿಕರ ರಕ್ಷಣೆಗೆ ಬದ್ಧರಾಗಿರುವ ಕೇಂದ್ರ ಸರ್ಕಾರವನ್ನು, ಸೈನ್ಯವನ್ನು ಗೌರವಿಸುತ್ತಿದೆ. ಆಪರೇಷನ್ ಸಿಂಧೂರ್, ಇದು ಕೇವಲ ಮಿಲಿಟರಿ ಯಶಸ್ಸಲ್ಲ. ಇದು ನಾಗರಿಕತೆಯ ಪ್ರತಿಕ್ರಿಯೆಯಾಗಿದೆ. ಅದು ಸಂಘರ್ಷವನ್ನು ಬಯಸುವುದಿಲ್ಲ, ಅದರ ಆಟಕ್ಕೆ ಎಂದಿಗೂ ಹೆದರುವುದಿಲ್ಲ ಎಂಬ ಒಂದು ಹೊಸ ಭಾರತವು ಪುಟಿದೆದ್ದಿದೆ. "ಭಾರತವು ಜಗತ್ತಿಗೆ ತನ್ನ ವಿರಾಟ ರೂಪವನ್ನು ತೋರಿಸಿದೆ. ಸಾಮರಸ್ಯದಿಂದ ಬದುಕಲಿ ಸಿದ್ಧರಿರುವ ಶಾಂತಿಯುತ ರಾಷ್ಟ್ರ, ಆದರೆ ಅದರ ಸಾರ್ವಭೌಮತ್ವವನ್ನು ಪ್ರಶ್ನಿಸಿದರೆ, ಅವರನ್ನು ಸುಟ್ಟು ಬೂದಿ ಮಾಡಲು ಸಂಪೂರ್ಣವಾಗಿ ಸಿದ್ಧವಾಗಿದೆ". ಭಾರತ ಮಾತೆಯ ಸಿಂಧೂರ ಜಮ್ಮು–ಕಾಶ್ಮೀರವನ್ನು ಮತ್ತೊಮ್ಮೆ ಅಖಂಡವಾಗಿ ಕಣ್ಣುಂಬಿಕೊಳ್ಳುವ ದಿನಗಳು ನಮ್ಮ ಮುಂದಿದೆ. ಈ ಸಂದರ್ಭದಲ್ಲಿ ಸಮಾಜಕ್ಕೆ ಇನ್ನಷ್ಟು ಶಕ್ತಿ, ಸೈನ್ಯಕ್ಕೆ ಧೈರ್ಯವನ್ನು, ಬೆಂಬಲವನ್ನು ನೀಡುವ ಸಂದರ್ಭ ಇದು. ನಮ್ಮ ಧಮನಿ ಧಮನಿಗಳಲ್ಲಿ ಅಡಗಿರುವ ಭಾರತದ ಭಕ್ತಿಯನ್ನು ಪ್ರಕಟಪಡಿಸುವ ಘಳಿಗೆ ಇದಾಗಿದೆ. ಪ್ರತಿ ಮನೆ ಮನೆಯಿಂದಲೂ ತ್ರಿವರ್ಣ ಧ್ವಜಗಳನ್ನು ಹಿಡಿದು ವಿಜಯ ಯಾತ್ರೆಯಲ್ಲಿ ಮನೆ ಮಂದಿಯೆಲ್ಲರೂ ಪಾಲ್ಗೊಳ್ಳಬೇಕಿದೆ ಎಂದು ಮನವಿ ಮಾಡಿದರು.

ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಯೋಗೇಶ್ ಸಹ್ಯಾದ್ರಿ ಮಾತನಾಡಿ, ಮೇ. 17 ರ ಬೆಳಿಗ್ಗೆ 10 ಗಂಟೆಗೆ ಶೋಭಾಯಾತ್ರೆಯು ಹೊಳಲ್ಕೆರೆ ರಸ್ತೆಯ ಕ್ರಾಂತಿವೀರ ಸಂಗೊಳ್ಳಿರಾಯಣ್ಣ ವೃತ್ತದಿಂದ ಪ್ರಾರಂಭವಾಗಿ, ಸಂಪಿಗೆ ಸಿದ್ದೇಶ್ವರ ಶಾಲೆಯ ಮೂಲಕ ಸಂತೇಪೇಟೆ, ಬಿ.ಡಿ.ರಸ್ತೆ, ಎಸ್,ಬಿಎಂ. ವೃತ್ತ, ಮಹಾವೀರ ವೃತ್ತ, ತಾಲ್ಲೂಕು ಕಚೇರಿ ಮುಂಭಾಗ ವಾಸವಿ ವೃತ್ತದ ಮೂಲಕ ಡಿ.ಸಿ. ಸರ್ಕಲ್‌ನ ಒನಕೆ ಓಬವ್ವ ವೃತ್ತದಲ್ಲಿ ಬೃಹತ್ ಸಾರ್ವಜನಿಕ ಸಮಾರಂಭ ನಡೆಯಲಿದೆ. ಈ ಶೋಭಾಯಾತ್ರೆಯಲ್ಲಿ ಈ ತಿರಂಗ ಯಾತ್ರೆಯಲ್ಲಿ 1 ಕಿ.ಮೀ, ಉದ್ದದ ತ್ರಿವರ್ಣ ಧ್ವಜವನ್ನು ಪ್ರದರ್ಶನ ಮಾಡಲಾಗುವುದು. ಇಸ್ರೇಲ್ ಯುದ್ಧ ವಿಮಾನಗಳ ಮಾದರಿ, ದೇಶ ಭಕ್ತರ ವೇಷಭೂಷಣಗಳನ್ನು ತೊಟ್ಟ ಮಕ್ಕಳು ಭಾಗವಹಿಸಲಿದ್ದು, ನಗರದ ವಿವಿಧ ಸಂಘಟನೆ, ಸಂಘದ ಪದಾಧಿಕಾರಿಗಳು, ರೈತರು, ಕಾರ್ಮಿಕರು, ಮಠಾಧೀಶರು, ನ್ಯಾಯಾವಾದಿಗಳು, ವೈದ್ಯರ ಸಂಘ ನಿವೃತ್ತ ಸೈನಿಕರ ಸಂಘ, ಕಾಲೇಜಿನ ವಿದ್ಯಾರ್ಥಿಗಳು, ಸ್ವಸಹಾಯ ಸಂಘದ ಪದಾಧಿಕಾರಿಗಳು, ಯೋಗ ಸಮಿತಿಯವರು, ಯುವಜನಾಂಗ, ಕ್ರೀಡಾಪಟುಗಳು ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು ಸೇರಿದಂತೆ ಸುಮಾರು 5000ಕ್ಕೂ ಹೆಚ್ಚು ಜನತೆ ಭಾಗವಹಿಸಲಿದ್ದಾರೆ.

ಗೋಷ್ಠಿಯಲ್ಲಿ ಸಾಹಿತಿಗಳಾದ ಪತಂಜಲಿ ಯೋಗ ಸಂಸ್ಥೆಯ ಜಿಲ್ಲಾಧ್ಯಕ್ಷ ದೇವಾನಂದ ನಾಯ್ಕ್, ಇನ್ನರ್ ವೀಲ್ ಕಬ್ಲ್‌ನ ಮಾಜಿ ಅಧ್ಯಕ್ಷರಾದ ರೂಪ ಜನಾರ್ಧನ್, ವಾಸವಿ ಮಹಿಳಾ ಸಂಘದ ಅಧ್ಯಕ್ಷರಾದ ಸರ್ವದ ಸುರೇಶ್ ಗುಪ್ತ, ಸಂಘದ ಪರಿವಾರದ ಪ್ರಮುಖರಾದ ನವೀನ್, ಕಲಾವಿದರಾದ ನಾಗರಾಜ್ ಬೇದ್ರೇ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಅಬಕಾರಿ ಇಲಾಖೆ ದಾಳಿ: 2.21 ಲಕ್ಷ ಮೌಲ್ಯದ ಸೇಂದಿ, ಬೈಕ್ ಸಹಿತ ವಶ



» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಮಲ್ಲಸಮುದ್ರಗ್ರಾಮದಿಂದ ತಾಳಿಕೆರೆ ಹೋಗುವ ರಸ್ತೆಯಲ್ಲಿ ಅದೇ ಗ್ರಾಮದ ಮಂಜುನಾಥ ಮತ್ತು ಚಿತ್ರದುರ್ಗ ತಾಲ್ಲೂಕಿನ ಕಾಕಬಾಳು ಗ್ರಾಮದ ಸಿ.ರಾಜು ಎಂಬುವವರು ತಮ್ಮ ಬೈಕ್‌ನಲ್ಲಿ ಸುಮಾರು 18 ಲೀಟರ್ ಸೇಂದಿಯನ್ನು ಸಾಗಾಟ ಮಾಡುವ ಸಂದರ್ಭದಲ್ಲಿ ಅಬಕಾರಿ ಇಲಾಖೆ ದಾಳಿ ನಡೆಸಿ ಇಬ್ಬರನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದೆ. ಜಿಲ್ಲಾ ಅಬಕಾರಿ ಉಪ ಆಯುಕ್ತರು, ಹಿರಿಯೂರು ಅಬಕಾರಿ ಉಪಾಧೀಕ್ಷಕರ ಮಾರ್ಗದರ್ಶನದಲ್ಲಿ ಖಚಿತ ವರ್ತಮಾನದ ಮೇರೆಗೆ ಅಬಕಾರಿ ನಿರೀಕ್ಷಕ ನಾಗರಾಜು, ಸಬ್‌ಇನ್‌ಪೆಕ್ಟರ್‌ಗಳಾದ ರಂಗಸ್ವಾಮಿ, ತಿಪ್ಪಯ್ಯ, ಮುಖ್ಯಪೇದೆ ನಾಗರಾಜು, ಮಂಜುಳಾ, ಪೇದೆ ದರ್ಶನಕುಮಾರ್, ವಾಹನ ಚಾಲಕ ನವೀನ್ ಮತ್ತು ಸಿಬ್ಬಂದಿ ವರ್ಗ ದಾಳಿ ನಡೆಸಿ ಆರೋಪಿಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡಿದ್ದಾರೆ. ವಶಪಡಿಸಿಕೊಂಡ ಮಾಲಿನ ಮೊತ್ತ(ಬೈಕ್ ಸೇರಿ) ಅಂದಾಜು. 2.21ಲಕ್ಷ ಎನ್ನಲಾಗಿದೆ.

### ಪ್ರತಿಭಾ ಪುರಸ್ಕಾರ

» ಚಿತ್ರದುರ್ಗ

ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನು ಹಮ್ಮಿಕೊಳ್ಳಲಾಗಿದೆ. 2024–25 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಶೇ.90 ಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದಿರುವ ಜಿಲ್ಲೆಯ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ವಿದ್ಯಾರ್ಥಿಗಳು ಅಂಕಪಟ್ಟಿ ಪ್ರತಿ, ನಿವಾಸಿ ದೃಢೀಕರಣ ಪತ್ರ, ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ ಹಾಗೂ ಎರಡು ಪಾಸ್‌ಪೋರ್ಟ್ ಅಳತೆಯ ಫೋಟೊದೊಂದಿಗೆ ದಿನಾಂಕ : 24–5–2025 ರೊಳಗಾಗಿ ರೋಟರಿ ಬಾಲಭವನ ಸಮೀಪ, ಡಿ.ಸಿ.ಸರ್ಕಲ್‌ನಲ್ಲಿರುವ ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ಕಚೇರಿಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ಕಾರ್ಯದರ್ಶಿ ಡಿ.ಟಿ.ಶಿವಾನಂದಪ್ಪ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊ : 9448423229 ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ.

### ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ, ನೋಂದಣಿ ಪ್ರಮಾಣ ಪತ್ರ ಪಡೆಯಲು ಸೂಚನೆ

» ಚಿತ್ರದುರ್ಗ

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು ಸೇವಾಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ, ನೋಂದಣಿ ಪ್ರಮಾಣ ಪತ್ರ ಪಡೆಬೇಕು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ಈ ಹಿಂದೆ ಮ್ಯಾನುಯಲ್ ಆಗಿ ವಿತರಿಸಲಾಗುತ್ತಿದ್ದ ನೋಂದಣಿ ಪ್ರಮಾಣ ಪತ್ರಗಳನ್ನು ರದ್ದುಗೊಳಿಸಿ ಆದೇಶಿಸಲಾಗಿದೆ. ವಿದ್ಯುನ್ಮಾನ ನಾಗರಿಕ ಸೇವಾ ವಿತರಣ ನಿರ್ದೇಶನಾಲಯ ಈ ಆಡಳಿತ ಇಲಾಖೆಯ ಸೇವಾ ಸಿಂಧು ಯೋಜನೆಯಡಿ ನೋಂದಣಿ ಮಾಡಿಸಲು ಆನ್‌ಲೈನ್ ತಂತ್ರಾಂಶ ಅಭಿವೃದ್ಧಿ ಪಡಿಸಿದ್ದು, ಈ ತಂತ್ರಾಂಶ ಬಳಸಿ ಸ್ವಯಂ ಸೇವಾ ಸಂಸ್ಥೆಗಳಿಗೆ ನೋಂದಣಿ, ನವೀಕರಣ ಪ್ರಮಾಣ ಪತ್ರ ವಿತರಿಸಲಾಗುವುದು. ಈ ಹಿನ್ನೆಲೆಯಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಹಿರಿಯ ನಾಗರಿಕರ ವೃದ್ಧಾಶ್ರಮಗಳನ್ನು ನಡೆಸುತ್ತಿರುವ ಎಲ್ಲಾ ಅನುದಾನಿತ/ಅನುದಾನರಹಿತ ಸ್ವಯಂ ಸೇವಾ ಸಂಸ್ಥೆಗಳು ಆನ್‌ಲೈನ್ ಮೂಲಕ https://sevasindhu.karnataka.gov.in ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಿ ನೋಂದಣಿ ಪ್ರಮಾಣ ಪತ್ರ ಪಡೆಯಬೇಕೆಂದು ಈ ಮೂಲಕ ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯನಾಗರಿಕರ ಸಬಲೀಕರಣ ಇಲಾಖೆ. ಜಿಲ್ಲಾ ಬಾಲಭವನ ಆವರಣ, ಸ್ಟೇಡಿಯಂ ಹತ್ತಿರ, ಚಿತ್ರದುರ್ಗ ದೂರವಾಣಿ ಸಂಖ್ಯೆ:08194–235284 ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

### ರಾಷ್ಟ್ರೀಯ ಡೆಂಗಿ ದಿನದ ಅಂಗವಾಗಿ ಜಾಥಾ ಕಾರ್ಯಕ್ರಮದಲ್ಲಿ ಡಿಹೆಚ್‌ಒ ಡಾ.ಜಿ.ಪಿ.ರೇಣುಪ್ರಸಾದ್

# ಡೆಂಗಿ ನಿಯಂತ್ರಣಕ್ಕೆ ಎಲ್ಲರೂ ಸಹಕರಿಸಿ

» ಚಿತ್ರದುರ್ಗ

ಮುಂಗಾರು ಮಳೆ ಪ್ರಾರಂಭವಾಗಲಿದ್ದು, ಡೆಂಗಿ ನಿಯಂತ್ರಣಕ್ಕೆ ಎಲ್ಲರೂ ಸಹಕರಿಸಿ ಮುಂಜಾಗ್ರತಾ ಕ್ರಮಕೈಗೊಳ್ಳಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಹೇಳಿದರು.

ನಗರದ ಜಿಲ್ಲಾಸ್ಪತ್ರೆ ಆವರಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಇಲಾಖೆ, ಜಿಲ್ಲಾ ಕೀಟಜನ್ಯ ರೋಗಗಳ ನಿಯಂತ್ರಣ ವಿಭಾಗ, ಜಿಲ್ಲಾಸ್ಪತ್ರೆ ಸಹಯೋಗದೊಂದಿಗೆ ರಾಷ್ಟ್ರೀಯ ಡೆಂಗಿ ದಿನ ಅಂಗವಾಗಿ ಜಾಗೃತಿ ಜಾಥಾಕ್ಕೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರತಿ ವರ್ಷದಂತೆ ಈ ವರ್ಷವೂ ಸಹ ಸಾರ್ವಜನಿಕ ಜಾಗೃತಿಗಾಗಿ ರಾಷ್ಟ್ರೀಯ ಡೆಂಗಿ ದಿನ ಆಚರಿಸಲಾಗುತ್ತಿದೆ. ಈ ವರ್ಷದ ಧ್ಯೇಯವಾಕ್ಯ,ಡೆಂಗಿ ಸೋಲಿಸಲು ಹೆಜ್ಜೆಗಳು: ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ ಎಂಬುದಾಗಿದ್ದು, ಎಲ್ಲ ಹಂತಗಳಲ್ಲಿಯೂ ಚಟುವಟಿಕೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ಕಳೆದ ವರ್ಷ 929 ಡೆಂಗಿ ಪ್ರಕರಣಗಳು ಜಿಲ್ಲೆಯಾದ್ಯಂತ ಪತ್ತೆಯಾಗಿದ್ದವು. ಈ ವರ್ಷ ಮೇ15 ರವರೆಗೆ 43 ಪ್ರಕರಣಗಳು ಕಂಡುಬಂದಿರುತ್ತವೆ. ಪ್ರಕರಣಗಳ ಸಂಖ್ಯೆಯಲ್ಲಿ ಇಳಿಮುಖವಾಗಿದೆ. ಆದಾಗ್ಯೂ ಸಹ ಮುಂಜಾಗ್ರತಾ ಕ್ರಮ ಜಾರಿಯಲ್ಲಿರಬೇಕು. ಇಲಾಖೆಯಾಗಲಿ, ಸಾರ್ವಜನಿಕರಾಗಲಿ ನಿರ್ಲಕ್ಷ್ಯತೋರುವುದು ಬೇಡ ಎಂದರು.




ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಕಾಶಿ ಮಾತನಾಡಿ, ನಗರ ಪ್ರದೇಶಗಳಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚು ಕಂಡು ಬರುತ್ತಿದ್ದು, ಪ್ರತಿ ಶುಕ್ರವಾರ ಮತ್ತು ಮಂಗಳವಾರ ನಗರ ಲಾರ್ವ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ. ಅಲ್ಲಲ್ಲಿ ಆರೋಗ್ಯ ಶಿಕ್ಷಣವನ್ನು ನೀಡಲಾಗುತ್ತದೆ ಎಂದು ತಿಳಿಸಿದರು.

ಗುಂಪು ಸಭೆಗಳು, ತಾಯಂದಿರ ಸಭೆಗಳು ನಡೆಸಿ ಕರಪತ್ರಗಳನ್ನು ವಿತರಿಸಿ ಡೆಂಗ್ಯೂ ಜಾಗೃತಿಯನ್ನು ಮೂಡಿಸಲಾಗುತ್ತಿದೆ. ಮನೆಮನೆಗಳಲ್ಲಿ ನೀರಿನ ಸಂಗ್ರಹ ಪರಿಕಾರಗಳ ಸ್ವಚ್ಛತೆ, ಒಣ ದಿನ ಆಚರಣೆ, ಮುಂಜಾನೆ ಮತ್ತು ಮುಸ್ಸಂಜೆಯಲ್ಲಿ ಸೊಳ್ಳೆ ಬತ್ತಿ ಉರಿಸುವ ಬಗ್ಗೆ, ಮನೆಯ ಕಿಟಕಿಗಳಿಗೆ ಜಾಲರ ಅಳವಡಿಕೆ, ಸೊಳ್ಳೆ ಪರದೆ ಉಪಯೋಗಿಸುವ ಬಗ್ಗೆ, ಘನ ತ್ಯಾಜ್ಯ ವಸ್ತುಗಳ ಸರಿಯಾದ ಕ್ರಮದಲ್ಲಿ ವಿಲೇವಾರಿ ಮಾಡುವ ಬಗ್ಗೆ ಮಾಹಿತಿ ಶಿಕ್ಷಣ ನೀಡಲಾಗುತ್ತಿದೆ ಎಂದರು.

ಜಾಥಾ ಕಾರ್ಯಕ್ರಮವು ಜಿಲ್ಲಾ ಆಸ್ಪತ್ರೆಯಿಂದ ಪ್ರಾರಂಭವಾಗಿ ಜೋಗಿಮಟ್ಟಿ ರಸ್ತೆ, ಕರುವಿನಕಟ್ಟೆ ಸರ್ಕಲ್‌ನಲ್ಲಿ ಮಾನವ ಸರಪಳಿ ನಿರ್ಮಿಸಿ, ರಂಗಯ್ಯನ ಬಾಗಿಲು ಮೂಲಕ ಪುನಃ ಜಿಲ್ಲಾ ಆಸ್ಪತ್ರೆ ತಲುಪಿತು. ನರ್ಸಿಂಗ್ ವಿದ್ಯಾರ್ಥಿಗಳು ಜಾಥಾದಲ್ಲಿ ಡೆಂಗ್ಯೂ ನಿಯಂತ್ರಣ ನಮ್ಮೆಲ್ಲರ ಜವಾಬ್ದಾರಿ ಎಂಬ ಘೋಷಣೆ ಕೂಗಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ರವೀಂದ್ರ, ನಿವಾಸಿ ವೈದ್ಯಾಧಿಕಾರಿ ಡಾ.ಆನಂದ ಪ್ರಕಾಶ್, ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಸಿ.ಓ.ಸುಧಾ, ಡಾ.ರೇಖಾ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ರಾಜ್ಯಮಟ್ಟದಿಂದ ಆಗಮಿಸಿದ ಆರೋಗ್ಯ ಶಿಕ್ಷಣಾಧಿಕಾರಿ ಶಿವರಾಜ್, ಜಿಲ್ಲಾ ಆರೋಗ್ಯ ಮೇಲ್ವಿಚಾರಣಾ ಅಧಿಕಾರಿ ಸುರೇಶ್ ಬಾಬು, ಮಲೇರಿಯಾ ವಿಭಾಗದ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಪಾಂಡು, ಮಲ್ಲಿಕಾರ್ಜುನ್, ನಾಗರಾಜ್, ಮಳಲಿ ಶ್ರೀನಿವಾಸ್, ತುರುವನೂರು ಶ್ರೀನಿವಾಸ್, ಗುರುಮೂರ್ತಿ, ನಂದೀಶ್, ಗಂಗಾಧರ್, ರುದ್ರಮುನಿ, ಆಶಾ ಕಾರ್ಯಕರ್ತೆಯರು, ನರ್ಸಿಂಗ್ ಕಾಲೇಜ್ ವಿದ್ಯಾರ್ಥಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು ಇದ್ದರು.

### ಆಶ್ರಯ ಮನೆ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಶಾಸಕ ವೀರೇಂದ್ರ ಪಪ್ಪಿ ಭೇಟಿ

# ತ್ವರಿತವಾಗಿ ಮನೆಗಳ ನಿರ್ಮಾಣ ಕಾರ್ಯ ಪೂರ್ಣಗೊಳಿಸಲು ತಾಕೀತು

» ಚಿತ್ರದುರ್ಗ

ಚಿತ್ರದುರ್ಗ ನಗರದ ಮೇಗಲಹಳ್ಳಿ ಬಳಿ ಆಶ್ರಯ ಮನೆಗಳ ನಿರ್ಮಾಣ ಕಾಮಗಾರಿಯ ಸ್ಥಳಕ್ಕೆ ನಗರ ಆಶ್ರಯ ಸಮಿತಿಯ ಅಧ್ಯಕ್ಷರೂ ಆಗಿರುವ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ಶುಕ್ರವಾರದಂದು ಭೇಟಿ ನೀಡಿ ಪರಿಶೀಲನೆ ನಡೆಸಿ, ಶೀಘ್ರ ಮನೆಗಳ ನಿರ್ಮಾಣ ಕಾರ್ಯ ಪೂರ್ಣಗೊಳಿಸಬೇಕು ಎಂದು ಗುತ್ತಿಗೆದಾರರಿಗೆ ತಾಕೀತು ಮಾಡಿದರು.

ಚಿತ್ರದುರ್ಗ ನಗರದ ಮೇಗಲಹಳ್ಳಿ ರಿ. ಸರ್ವೆ ನಂ. 22 ರಲ್ಲಿನ 15 ಎಕರೆ 20 ಗುಂಟೆ ಜಮೀನಿನಲ್ಲಿ 1001 ಸಂಖ್ಯೆಯ ಜಿ+2 ಮಾದರಿಯ ಮನೆಗಳನ್ನು ನಿರ್ಮಾಣ ಮಾಡಲಾಗುತ್ತಿದ್ದು, ಕಾಮಗಾರಿಗೆ ವೇಗ ನೀಡಿ, ಆದಷ್ಟು ಶೀಘ್ರ ಮನೆಗಳ ನಿರ್ಮಾಣ ಪೂರ್ಣಗೊಳಿಸಬೇಕು ಎಂದು ಗುತ್ತಿಗೆದಾರರಿಗೆ ತಾಕೀತು ಮಾಡಿದರು. ಈಗಾಗಲೆ 714 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. ಎ.ಹೆಚ್.ಪಿ ಯೋಜನೆಯಡಿ 2022ನೇ ಸಾಲಿನಲ್ಲಿ ಗುತ್ತಿಗೆದಾರರಿಗೆ ಮನೆ ನಿರ್ಮಾಣ ಕೆಲಸದ ಆದೇಶ ನೀಡಲಾಗಿರುತ್ತದೆ.



ಆದರೆ ಈವರೆಗೂ ಕಾಮಗಾರಿ ಪೂರ್ಣಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. 2026 ರ ಮಾರ್ಚ್ ಅಂತ್ಯದ ಒಳಗಾಗಿ ಎಲ್ಲ 1001 ಮನೆಗಳನ್ನು ಪೂರ್ಣಗೊಳಿಸುವುದಾಗಿ ಇದೇ ವೇಳೆ ಗುತ್ತಿಗೆದಾರರು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ನಗರಸಭೆ ಪೌರಾಯುಕ್ತೆ ಎಂ. ರೇಣುಕಾ, ಗುತ್ತಿಗೆದಾರರು, ನಗರಸಭೆ ಸಿಬ್ಬಂದಿಗಳು ಹಾಜರಿದ್ದರು.

### ವೀರಭದ್ರಸ್ವಾಮಿ ದೇವಸ್ಥಾನದ ನೂತನ ಉತ್ಸವ ಮೂರ್ತಿ ಪ್ರತಿಷ್ಠಾಪನೆ



» ಚಿತ್ರದುರ್ಗ

ತಾಲ್ಲೂಕಿನ ಸಿದ್ದಾಪುರ ಗ್ರಾಮದಲ್ಲಿನ ಶ್ರೀ ಭದ್ರಕಾಳಮ್ಮ ಸಮೇತ ಶ್ರೀ ವೀರಭದ್ರಸ್ವಾಮಿ ದೇವಸ್ಥಾನದ ನೂತನ ಉತ್ಸವ ಮೂರ್ತಿ ಪ್ರತಿಷ್ಠಾಪನೆ ಲೋಕಾರ್ಪಣೆ ಸಮಾರಂಭದ ಅಂಗವಾಗಿ ಸಂಜೆ ಗ್ರಾಮದಲ್ಲಿ ವೀರಭದ್ರಸ್ವಾಮಿ, ಕರಿಯಮ್ಮ ಹಾಗೂ ದುರ್ಗಮ್ಮ ದೇವಿಯ ಮೂರ್ತಿಗಳನ್ನು ಗೋದೂಳಿ ಲಗ್ನದಲ್ಲಿ ಇತ್ತಿಚೆಗೆ ಮೆರವಣಿಗೆಯನ್ನು ಶ್ರೀ ವೀರಭದ್ರೇಶ್ವರ ಭಕ್ತ ಮಂಡಳಿವತಿಯಿಂದ ನಡೆಸಲಾಯಿತು. ಅಂದು ಬೆಳಿಗ್ಗೆ ಲೋಕ ಕಲ್ಯಾಣಾರ್ಥವಾಗಿ ಬ್ರಾಹ್ಮಿ ಮುಹೂರ್ತದಲ್ಲಿ ಕಲಶ ಸ್ಥಾಪನೆ, ಉತ್ಸವಮೂರ್ತಿಗೆ ಪ್ರಾಣ ಪತ್ರಿಷ್ಠೆ, ರುದ್ರಾಭಿಷೇಕ, ಗಣ ಹೋಮ ಪೂರ್ಣಾಹುತಿ ನಂತರ ಮಹಾಮಂಗಳಾರತಿ ಪ್ರಸಾದ ವಿನಿಯೋಗ ನಂತರ ಗೋದೂಳಿ ಲಗ್ನದಲ್ಲಿ ಗಂಗಾ ಪೂಜೆ, ಗೋಪೂಜೆ, ದೀಪ ಪೂಜೆ, ಗಣಪತಿ ಸ್ವಸ್ತಿ ಪುಣ್ಯಾಹ ವಾಚನ ಹಾಗೂ ವಿಗ್ರಹ ಸಂಸ್ಕಾರ ಪೂಜಾ ಕಾರ್ಯಕ್ರಮ ನಡೆಸಲಾಯಿತು.ಸಂಜೆ 6 ಗಂಟೆ ಸಮಯದಲ್ಲಿ ಗ್ರಾಮದ ವೀರಭದ್ರ ಸ್ವಾಮಿ ದೇವಾಲಯದಿಂದ ವೀರಭದ್ರಸ್ವಾಮಿ, ಕರಿಯಮ್ಮ ಹಾಗೂ ದುರ್ಗಮ್ಮ ದೇವಿಯ ಮೂರ್ತಿಗಳನ್ನು ವಿವಿಧ ರೀತಿಯ ಹೂಗಳಿಂದ ಅಲಂಕಾರವನ್ನು ಮಾಡುವುದರ ಮೂಲಕ ಗ್ರಾಮದ ವಿವಿಧ ಬೀದಿಗಳಲ್ಲಿ ಮೆರವಣಿಗೆಯನ್ನು ಮಾಡಲಾಯಿತು. ಈ ಸಮಯದಲ್ಲಿ ನಂದಿ ಧ್ವಜ, ವೀರಗಾಸೆ, ವಿವಿಧ ರೀತಿಯ ಜಾನಪದ ಕಲಾ ತಂಡಗಳು ಭಾಗವಹಿಸಿದ್ದವು. ಈ ಸಮಯದಲ್ಲಿ ಪುರವಂತರಿಂದ ವೀರಭದ್ರಸ್ವಾಮಿಯ ಒಡಪುಗಳನ್ನು ಹೇಳುವುದರ ಮೂಲಕ ಮೆರವಣಿಗೆಯನ್ನು ನಡೆಸಲಾಯಿತು.ಗ್ರಾಮದಲ್ಲಿನ ಗ್ರಾಮಸ್ಥರು ತಮ್ಮ ಮನೆಯ ಮುಂದೆ ನೀರನ್ನು ಹಾಕಿ ರಂಗೋಲಿಯನ್ನು ಇಟ್ಟು ಮೆರವಣಿಗೆಯನ್ನು ಸ್ವಾಗತಿಸಿ ತಮ್ಮ ಮನೆಯ ಬಾಗಿಲಿಗೆ ಮೆರವಣಿಗೆ ಬಂದಾಗ ಹಣ್ಣು–ಕಾಯಿಯನ್ನು ನೀಡಿ ಪೂಜೆಯನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ ಗ್ರಾಮಸ್ಥರಾದ ಪಟೇಲ್ ರುದ್ರಪ್ಪ, ಪಟೇಲ್ ಶಿವಕುಮಾರ್, ಪಟೇಲ್ ಪಾಪಣ್ಣ, ರವಿಕುಮಾರ್, ಸಿದ್ದಾಪುರದ ನಾಗಣ್ಣ, ಸುರೇಶ್, ಲೋಕಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಅಂತರ ಕಾಲೇಜು ಮಹಿಳಾ ಕಬಡ್ಡಿ: ಸರ್ಕಾರಿ ವಿಜ್ಞಾನ ಕಾಲೇಜಿನ ತಂಡಕ್ಕೆ ಬಂಗಾರದ ಪದಕ

» ಚಿತ್ರದುರ್ಗ

ಹೊನ್ನಾಳಿಯ ಎಸ್.ಎಂ.ಎಸ್. ಪದವಿ ಕಾಲೇಜಿನಲ್ಲಿ ನಡೆದ ದಾವಣಗೆರೆ ವಿಶ್ವವಿದ್ಯಾನಿಲಯ ಅಂತರ ಕಾಲೇಜು ಮಹಿಳಾ ಕಬಡ್ಡಿ ಪಂದ್ಯಾವಳಿಯಲ್ಲಿ ಚಿತ್ರದುರ್ಗ ಸರ್ಕಾರಿ ವಿಜ್ಞಾನ ಕಾಲೇಜಿನ ತಂಡ ಬಂಗಾರದ ಪದಕ ಗಳಿಸಿ ಕಾಲೇಜಿಗೆ ಕೀರ್ತಿ ತಂದಿದೆ. ಮಹಿಳಾ ತಂಡದ ಅಭೂತಪೂರ್ವ ಸಾಧನೆಗೆ ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರು, ಸದಸ್ಯರು ಮತ್ತು ಪ್ರಾಂಶುಪಾಲರು ಅಭಿನಂದಿಸಿದ್ದಾರೆ.



## ಪ್ರಮುಖ ಸುದ್ದಿ

### ಉನ್ನತ ಶಿಕ್ಷಣ ಮಾಹಿತಿ ಕಾರ್ಯಾಗಾರದಲ್ಲಿ ಡಿಡಿಪಿಯು ಪುಟ್ಟಸ್ವಾಮಿ

# ಪಿಯು ಹಂತದಲ್ಲಿಯೇ ಉನ್ನತ ಶಿಕ್ಷಣದ ಮಾರ್ಗದರ್ಶನ ನೀಡಿ

» ಚಿತ್ರದುರ್ಗ

ಪದವಿ ಪೂರ್ವ ಹಂತದಲ್ಲಿಯೇ ಉಪನ್ಯಾಸಕರು ಉನ್ನತ ಶಿಕ್ಷಣದ ಕುರಿತು ವಿದ್ಯಾರ್ಥಿಗಳಿಗೆ ಸೂಕ್ತ ಪ್ರೇರಣೆ ಹಾಗೂ ಮಾರ್ಗದರ್ಶನ ನೀಡಿ ಅವರ ಭವಿಷ್ಯಕ್ಕೆ ಭದ್ರ ಬುನಾದಿ ಹಾಕಬೇಕು ಎಂದು ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್. ಪುಟ್ಟಸ್ವಾಮಿ ಹೇಳಿದರು.

ನಗರದ ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಕಚೇರಿಯಲ್ಲಿ ಶನಿವಾರ ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರಿನ ಕಾಲೇಜು ಮಾಹಿತಿ ಸಹಯೋಗದಲ್ಲಿ ಜಿಲ್ಲೆಯ ಪಿಯು ಕಾಲೇಜು ಪ್ರಾಂಶುಪಾಲರು ಹಾಗೂ ಉಪನ್ಯಾಸಕರಿಗಾಗಿ ಹಮ್ಮಿಕೊಂಡಿದ್ದ “ಉನ್ನತ ಶಿಕ್ಷಣ ಮಾಹಿತಿ ಕಾರ್ಯಾಗಾರ” ಉದ್ಘಾಟಿಸಿ ಅವರು ಮಾತನಾಡಿದರು.

ಪದವಿಪೂರ್ವ ಶಿಕ್ಷಣ ನಂತರ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಮಾಹಿತಿ ಅತ್ಯಗತ್ಯ. ಈ ನಿಟ್ಟಿನಲ್ಲಿ ಮಾಹಿತಿ ಕಾರ್ಯಾಗಾರ ಆಯೋಜಿಸಲಾಗಿದೆ. ಪಿಯು ನಂತರ ಯಾವ ಶಿಕ್ಷಣ ಪಡೆದರೆ ಅನುಕೂಲವಾಗಲಿದೆ ಎಂಬ ಮಾಹಿತಿ ಪದವಿ ಪೂರ್ವ ಹಂತದಲ್ಲಿಯೇ ನೀಡಬೇಕು. ಇದರಿಂದ ಗ್ರಾಮೀಣ ಪ್ರದೇಶದ ಬಡ ವಿದ್ಯಾರ್ಥಿಗಳಿಗೆ ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.



ಉನ್ನತ ಶಿಕ್ಷಣ ಮಾಹಿತಿ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳು ನೀಡುವ ಮಾಹಿತಿ, ಸಲಹೆ–ಸೂಚನೆಗಳನ್ನು ತಮ್ಮ ವಿದ್ಯಾರ್ಥಿಗಳಿಗೆ ತಲುಪಿಸುವ ಜವಾಬ್ದಾರಿ ಉಪನ್ಯಾಸಕರು ಮಾಡಬೇಕು ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ್ ಮಾತನಾಡಿ, ಪಿಯು ನಂತರ ಯಾವ ರೀತಿಯ ಕೋರ್ಸ್‌ಗಳನ್ನು ಆಯ್ಕೆ ಮಾಡಿಕೊಂಡರೆ ವಿದ್ಯಾರ್ಥಿಗಳ ಜೀವನಕ್ಕೆ ಅನುಕೂಲವಾಗಲಿದೆ ಎಂಬ ಮಾಹಿತಿಯನ್ನು ಸಂಪನ್ಮೂಲ ವ್ಯಕ್ತಿಗಳಿಂದ ತಿಳಿಸುವುದು ಅಗತ್ಯವಾಗಿದೆ. ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಇದ್ದು, ಈ ವಿದ್ಯಾರ್ಥಿಗಳಿಗೆ ಮಾಹಿತಿಯ ಕೊರತೆ ಇದೆ. ಮಾಹಿತಿ ಕೊರತೆಯಿಂದ ಜೀವನದಲ್ಲಿ ಹಿನ್ನಡೆಯಾಗುವ ಸಾಧ್ಯತೆಯೂ ಇದೆ. ಹಾಗಾಗಿ ನಾವು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುವ ಮೂಲಕ ಅವರ ಸರ್ವಾಂಗೀಣ ಪ್ರಗತಿಗೆ ಶ್ರಮಿಸಬೇಕಾಗಿದೆ ಎಂದು ಹೇಳಿದರು. ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ನೆರವಿಗಾಗಿ ಬ್ಯಾಂಕ್‌ಗಳು ಸಹ ಶೈಕ್ಷಣಿಕ ಸಾಲಸೌಲಭ್ಯವನ್ನು ನೀಡುತ್ತವೆ. ಇದರ ಜೊತೆಗೆ ಸರ್ಕಾರವು ಸಾಕಷ್ಟು ಸೌಲಭ್ಯಗಳನ್ನು ನೀಡುತ್ತಿದ್ದು, ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ನಿರ್ಮಾಣಕ್ಕೆ ನಾವೆಲ್ಲರೂ ಪಾತ್ರರಾಗೋಣ ಎಂದು ಅಭಿಪ್ರಾಯಪಟ್ಟರು.

ಎಸ್‌ಆರ್‌ಎಸ್ ವಿದ್ಯಾಸಂಸ್ಥೆಯ ಆಡಳಿತಾಧಿಕಾರಿ ಟಿ.ಎಸ್.ರವಿ ಮಾತನಾಡಿ, ಪಿಯು ಹಂತದಲ್ಲಿ ಮಕ್ಕಳಿಗೆ ಸ್ಪಷ್ಟವಾಗಿ, ಗೊಂದಲಕ್ಕೆ ಒಳಗಾಗದಂತೆ ತಮ್ಮ ಪ್ರತಿಭೆಗೆ ಪೂರಕವಾದ ಶಿಕ್ಷಣ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡರೆ ವಿದ್ಯಾರ್ಥಿಯ ಭವಿಷ್ಯ ಉಜ್ವಲವಾಗಿರುತ್ತದೆ ಎಂದು ಹೇಳಿದರು. ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಸಹಾಯಕ ಆಯುಕ್ತ ಪಿ.ವೈ. ದೇವರಾಜ್ ಪ್ರಸಾದ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಸುಬ್ರಮಣ್ಯ, ನಾಜಿಯಾ, ಕಾಲೇಜು ಮಾಹಿತಿಯ ರಾಹುಲ್ ರೆಡ್ಡಿ, ಆರ್ಥಿಕ ಸಲಹೆಗಾರ ತಿಪ್ಪೇಸ್ವಾಮಿ ಸೇರಿದಂತೆ ಜಿಲ್ಲೆಯ ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರು, ಉಪನ್ಯಾಸಕರು ಇದ್ದರು.

## ಫಾಸ್ಟ್ ನ್ಯೂಸ್

### ಮೇ.17 ರಿಂದ 18 ರವರೆಗೆ ಶಾಂತಿಸಾಗರ ನೀರು ಸರಬರಾಜು ಸ್ಥಗಿತ

» **ಚಿತ್ರದುರ್ಗ**

ಚಿತ್ರದುರ್ಗ ನಗರಕ್ಕೆ ಕುಡಿಯುವ ನೀರು ಸರಬರಾಜು ಆಗುವ ಶಾಂತಿಸಾಗರ ನೀರು ಸರಬರಾಜು ಯೋಜನೆಯ ಕೊಟ್ಟಿಗೆಹಳ್ಳಿ ಮದ್ಯಂತರ ಜಲಗಾರದಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ವಿದ್ಯುತ್ ಉಪಕರಣಗಳ ಪುನಃಶ್ಚೇತನ ಕಾಮಗಾರಿಯನ್ನು ಕೈಗೊಳ್ಳಲು ಹಾಗೂ ನಗರಸಭೆ ವತಿಯಿಂದ ಮುಖ್ಯ ಕೊಳವೆ ಮಾರ್ಗದಲ್ಲಿ ದುರಸ್ಥಿ ಕೆಲಸವನ್ನು ಕೈಗೊಳ್ಳಬೇಕಾಗಿರುವುದರಿಂದ ಶಾಂತಿಸಾಗರ ನೀರು ಸರಬರಾಜು ವ್ಯವಸ್ಥೆಯನ್ನು ತಾತ್ಕಾಲಿಕವಾಗಿ ಇದೇ ಮೇ.17 ರಿಂದ 18 ರವರೆಗೆ ಸ್ಥಗಿತಗೊಳ್ಳಲಿದೆ. ಸಾರ್ವಜನಿಕರು ತಮ್ಮ ತಮ್ಮ ಪ್ರದೇಶದಲ್ಲಿನ ಕೊಳವೆ ಬಾವಿಗಳ ನೀರನ್ನು ಮತ್ತು ಶುದ್ಧ ಕುಡಿಯುವ ನೀರನ್ನು ಉಪಯೋಗಿಸಲು ಕೋರಿದೆ ಹಾಗೂ ನೀರನ್ನು ಮಿತವಾಗಿ ಬಳಸಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕು ಎಂದು ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಕೋರಿದ್ದಾರೆ.

### ಕೈಮಗ್ಗ ನೇಕಾರರಿಗೆ ರಾಜ್ಯಮಟ್ಟದ ಪ್ರಶಸ್ತಿ

» **ಚಿತ್ರದುರ್ಗ**

ಕೈಮಗ್ಗ ಮತ್ತು ಜವಳಿ ಇಲಾಖೆಯು ರೇಷ್ಮೆ, ಹತ್ತಿ ಮತ್ತು ಉಣ್ಣೆ ಕೈಮಗ್ಗ ಉತ್ಪಾದನೆಗಳ ಅಭಿವೃದ್ಧಿಗಾಗಿ ಕೈಮಗ್ಗ ನೇಯ್ಗೆ ವೃತ್ತಿಯಲ್ಲಿ ನೈಪುಣ್ಯತೆ, ಶ್ರೇಷ್ಠತೆ, ತಾಂತ್ರಿಕತೆ, ಉತ್ಕೃಷ್ಠತೆಯ ಉತ್ಪನ್ನ ತಯಾರಿಸಿದ ಕೈಮಗ್ಗ ನೇಕಾರರಿಗೆ 2025–26ನೇ ಸಾಲಿನಲ್ಲಿ ರಾಜ್ಯಮಟ್ಟದ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಿದೆ. ಅರ್ಹರು ಕೈಮಗ್ಗ ಉತ್ಪಾದನೆಗಳ ಅಭಿವೃದ್ಧಿಗಾಗಿಕೈಮಗ್ಗ ನೇಯ್ಗೆಯ ಅಸಾಧಾರಣ ಕೌಶಲ್ಯದಲ್ಲಿ ಸುಮಾರು ಕನಿಷ್ಠ 30 ವರ್ಷ ಮೇಲ್ಪಟ್ಟವರು ಮತ್ತು ಕನಿಷ್ಟ 10 ವರ್ಷಗಳ ಅನುಭವ ಹೊಂದಿರಬೇಕು. ಆಸಕ್ತರು ಸೀರೆ, ಉಣ್ಣೆ ಕಂಬಳಿ ಉತ್ಪನ್ನದ ಮಾದರಿ ಬಣ್ಣದ ಛಾಯಾಚಿತ್ರ ಹಾಗೂ ವಿವಿಧ ಹಂತದ ವಿಡಿಯೋದೊಂದಿಗೆ ಅರ್ಜಿಯನ್ನು ಇದೇ ಮೇ.30ರೊಳಗಾಗಿ ಉಪನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಇವರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194–221426 ಗೆ ಕಚೇರಿಯ ವೇಳೆಯಲ್ಲಿ ನೇರವಾಗಿ ಸಂಪರ್ಕಿಸಬಹುದು.

### ಪರಿಶಿಷ್ಟ ಜಾತಿ ಒಳ ಮೀಸಲಾತಿ: ಸಮೀಕ್ಷಾ ಕಾರ್ಯ ಅವಧಿ ಮೇ. 28 ರವರೆಗೆ ವಿಸ್ತರಣೆ

» **ಚಿತ್ರದುರ್ಗ**

ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಕುರಿತು ನ್ಯಾಯಮೂರ್ತಿ ಡಾ.ಹೆಚ್.ಎನ್.ನಾಗಮೋಹನದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗವನ್ನು ಸರ್ಕಾರ ರಚಿಸಿದ್ದು, ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಂಬಂಧದ ವಿವಿಧ ಅಂಶಗಳ ಬಗ್ಗೆ ದತ್ತಾಂಶ ಸಂಗ್ರಹಣೆಗಾಗಿ ಜಿಲ್ಲೆಯಲ್ಲಿ ನಡೆದಿರುವ ಸಮೀಕ್ಷೆ ಕಾರ್ಯದ ಅವಧಿಯನ್ನು ಮೇ. 28 ರವರೆಗೆ ವಿಸ್ತರಿಸಲಾಗಿದೆ. ಪರಿಶಿಷ್ಟ ಜಾತಿ ಒಳಮೀಸಲಾತಿ ಸಂಬಂಧ ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ ಕಾರ್ಯ ಕಳೆದ ಮೇ. 05 ರಿಂದ ಆರಂಭಗೊಂಡಿದ್ದು, ಸರ್ಕಾರದ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಶುಕ್ರವಾರ ಜರುಗಿದ ವಿಡಿಯೋ ಸಂವಾದ ಸಭೆಯಲ್ಲಿ ಸೂಚನೆ ನೀಡಿರುವಂತೆ, ಇದೀಗ ಸಮೀಕ್ಷಾ ಕಾರ್ಯವನ್ನು ಮೇ. 28 ರವರೆಗೆ ವಿಸ್ತರಿಸಲಾಗಿದೆ. ಈ ಹಿಂದಿನ ವೇಳಾಪಟ್ಟಿಯಂತೆ ಒಟ್ಟಾರೆ ಸಮೀಕ್ಷಾ ಕಾರ್ಯ ಮೇ. 23 ರವರೆಗೆ ನಡೆಸಬೇಕಾಗಿತ್ತು. ಇದೀಗ ಮೇ. 28 ರವರೆಗೆ ಅವಧಿ ವಿಸ್ತರಿಸಲಾಗಿದೆ. ಪರಿಷ್ಕೃತ ವೇಳಾಪಟ್ಟಿಯಂತೆ ಮೊದಲನೆ ಹಂತದಲ್ಲಿ ಮನೆ ಮನೆ ಭೇಟಿ ನೀಡಿ ಕೈಗೊಳ್ಳುವ ಸಮೀಕ್ಷಾ ಕಾರ್ಯವು ಮೇ. 25 ರವರೆಗೆ ಜರುಗಲಿದೆ. ಎರಡನೆ ಹಂತದಲ್ಲಿ, ಸಮೀಕ್ಷೆ ಬ್ಲಾಕ್‌ಗಳಲ್ಲಿ ವಿಶೇಷ ಶಿಬಿರಗಳನ್ನು ಕೈಗೊಂಡು, ಮನೆ–ಮನೆ ಭೇಟಿ ಅವಧಿಯಲ್ಲಿ ಬಿಟ್ಟುಹೋದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿಯನ್ನು ಸಂಗ್ರಹಿಸುವ ಕಾರ್ಯ ಮೇ. 28 ರವರೆಗೆ ಜರುಗಲಿದ್ದು, ಮೂರನೆ ಹಂತದಲ್ಲಿ ಸ್ವಯಂ ಘೋಷಣೆ ಮಾಡಿ, ಆನ್‌ಲೈನ್ ಮೂಲಕ ಸಮೀಕ್ಷೆ ಕಾರ್ಯವು ಮೇ. 28 ರವರೆಗೆ ಜರುಗಲಿದೆ. ಸಾರ್ವಜನಿಕರು ಪರಿಷ್ಕೃತ ವೇಳಾಪಟ್ಟಿಯನ್ವಯ ಸಮೀಕ್ಷೆ ಸಂದರ್ಭದಲ್ಲಿ ಗಣತಿದಾರರಿಗೆ ಮತ್ತು ಮೇಲ್ವಿಚಾರಕರಿಗೆ ಕುಟುಂಬದ ಸಂಪೂರ್ಣ ಮಾಹಿತಿ ನೀಡಿ ಸಮೀಕ್ಷಾ ಕಾರ್ಯವನ್ನು ಯಶಸ್ವಿಗೊಳಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

### ರಸ್ತೆ ಸುರಕ್ಷತಾ ಸಭೆ

» **ದಾವಣಗೆರೆ**

ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಇವರ ಅಧ್ಯಕ್ಷತೆಯಲ್ಲಿ ಮೇ.21 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ದಾವಣಗೆರೆ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ.

# ಸರ್ಕಾರಕ್ಕೆ 2ವರ್ಷ ಹೊಸಪೇಟೆಯಲ್ಲಿ ಸಂಭ್ರಮಾಚರಣೆ

» **ಚಿತ್ರದುರ್ಗ**

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷಗಳಾಗುತ್ತಿರುವುದರಿಂದ ಮೇ.20 ರಂದು ಹೊಸಪೇಟೆಯಲ್ಲಿ ಸಂಭ್ರಮಾಚರಣೆ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಕಾರ್ಯಕರ್ತರು, ಮುಖಂಡರುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಎ.ಐ.ಸಿ.ಸಿ. ಕಾರ್ಯದರ್ಶಿ ಮಯೂರ್ ಜೈಕುಮಾರ್ ಮನವಿ ಮಾಡಿದರು.



ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಶುಕ್ರವಾರ ಕರೆಯಲಾಗಿದ್ದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು ವಿಧಾನಸಭೆ ಚುನಾವಣಾ ಪೂರ್ವದಲ್ಲಿ ಕಾಂಗ್ರೆಸ್‌ಘೋಷಿಸಿದಂತೆಅಧಿಕಾರಕ್ಕೆಬಂದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಐದು ಉಚಿತ ಗ್ಯಾರೆಂಟಿಗಳನ್ನು ನೀಡಿ ನುಡಿದಂತೆ ನಡೆದಿದ್ದಾರೆ. ಭಾರತದ ಯಾವ ರಾಜ್ಯದಲ್ಲಿಯೂ ಇಂತಹ ಯೋಜನೆಗಳನ್ನು ಕೊಟ್ಟಿಲ್ಲ. ತಾಂಡಾ ಮತ್ತು ಗೊಲ್ಲರಹಟ್ಟಿಗಳಲ್ಲಿರುವವರಿಗೆ ಒಂದು ಲಕ್ಷ ಹಕ್ಕುಪತ್ರಗಳನ್ನು ಸಂಭ್ರಮಾಚರಣೆಯಲ್ಲಿ ವಿತರಿಸಲಾಗುವುದೆಂದು ಹೇಳಿದರು.

ಜಿಲ್ಲೆಯಲ್ಲಿ ಹತ್ತು ಸಾವಿರ ಫಲಾನುಭವಿಗಳು ಹಕ್ಕುಪತ್ರಗಳನ್ನು ಪಡೆಯಲಿದ್ದಾರೆ. ಕಾರ್ಯಕರ್ತರೆ ಪಕ್ಷಕ್ಕೆ ಬುನಾದಿಯಿದ್ದಂತೆ. ಬ್ಲಾಕ್ ಅಧ್ಯಕ್ಷರು, ಶಾಸಕರುಗಳ ಸಂಪರ್ಕದೊಂದಿಗೆ ಬೂತ್ ಮಟ್ಟದಿಂದಲೂ ಜನರನ್ನು ಸಂಭ್ರಮಾಚರಣೆಗೆ ಕರೆ ತರುವಂತೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಿಗೆ ಸೂಚಿಸಿದ ಮಯೂರ್ ಜೈಕುಮಾರ್ ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳಲ್ಲಿ ಸಂವಿಧಾನ ಬಚಾವ್ ಆಂದೋಲನವಾಗಿದೆ. ಕೋಮುವಾದಿ ಬಿಜೆಪಿ. ಸಂವಿಧಾನವನ್ನು ಕಿತ್ತಾಕುವ ಹುನ್ನಾರ ನಡೆಸುತ್ತಿರುವುದರಿಂದ ಕಾರ್ಯಕರ್ತರು ಪ್ರತಿ ಮನೆ ಮನೆಗೆ ಹೋಗಿ ಸಂವಿಧಾನ ಉಳಿಸುವ ಕುರಿತು ಜಾಗೃತಿ ಮೂಡಿಸಬೇಕಿದೆ. ಸಿಬಿಐ. ಇಡಿ, ಐಟಿ ಸಂಸ್ಥೆಗಳನ್ನು ಕೇಂದ್ರ ಬಿಜೆಪಿ. ದ ುರುಪಯೋಗಪಡಿಸಿಕೊಳ್ಳುತ್ತಿರುವುದನ್ನು ಜನರಿಗೆ ಮನವರಿಕೆ ಮಾಡಿಕೊಡಬೇಕೆಂದು ತಿಳಿಸಿದರು. ಜಿಲ್ಲಾ ಪಂಚಾಯಿತಿ. ತಾಲ್ಲೂಕು ಪಂಚಾಯಿತಿ ಚುನಾವಣೆಗೆ ಕಾರ್ಯಕರ್ತರು ಸಿದ್ದರಾಗಬೇಕು. ಪ್ರತಿ ಗ್ರಾಮ ಪಂಚಾಯಿತಿ ಅಧ್ಯಕ್ಷರ ವಿಳಾಸ ಹಾಗೂ ಮೊಬೈಲ್ ಸಂಖ್ಯೆಗಳನ್ನು ನೀಡುವಂತೆ ಜಿಲ್ಲಾ ಕಾಂಗ್ರೆಸ್ ಸಮಿತಿಗೆ ಸೂಚಿಸಿದರು.ಕೆ.ಪಿ.ಸಿ.ಸಿ. ಉಪಾಧ್ಯಕ್ಷ ಮುರಳಿಧರ ಹಾಲಪ್ಪ ಮಾತನಾಡಿ ಮೇ.20 ರಂದು ಹೊಸಪೇಟೆಯಲ್ಲಿ ಕಾಂಗ್ರೆಸ್ ಸರ್ಕಾರದ ಸಾಧನಾ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಲಂಬಾಣಿತಾಂಡ, ಗೊಲ್ಲರಹಟ್ಟಿಗಳಲ್ಲಿ ವಾಸಿಸುತ್ತಿರುವವರಿಗೆ ಹಕ್ಕುಪತ್ರಗಳನ್ನು ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಘೋಷಿಸಿದ್ದರು. ಅದರಂತೆ ವಿತರಿಸಲಾಗುವುದು. ಜಿಲ್ಲೆಯ ಆರು ವಿಧಾನಸಭಾಕ್ಷೇತ್ರಗಳಿಂದಕಾರ್ಯಕರ್ತರು ಹಾಗೂ ಮುಖಂಡರುಗಳು ಹೆಚ್ಚಿನ ಸಂಖ್ಯೆಯಲ್ಲಿ ಸಂಭ್ರಮಾಚರಣೆಯಲ್ಲಿ ಪಾಲ್ಗೊಳ್ಳುವಂತೆ ವಿನಂತಿಸಿದರು.ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಮಾತನಾಡುತ್ತ ಹೊಸಪೇಟೆ ಇತಿಹಾಸದಲ್ಲಿಯೇ ಇದೆ ಮೊದಲ ಬಾರಿಗೆ ಕಾಂಗ್ರೆಸ್ ಸರ್ಕಾರದ ಎರಡು ವರ್ಷಗಳ ಸಂಭ್ರಮಾಚರಣೆ ಮೇ.20 ರಂದು ನಡೆಯಲಿದೆ. ಒಂದು ಲಕ್ಷ ಹಕ್ಕುಪತ್ರಗಳನ್ನು ತಾಂಡ ಹಾಗೂ ಗೊಲ್ಲರಹಟ್ಟಿಗಳಲ್ಲಿ ವಾಸಿಸುತ್ತಿರುವವರಿಗೆ ವಿತರಿಸಲಾಗುವುದು. ಜೊತೆಗೆ ಈ.ಸ್ವತ್ತು ಕೂಡುವ ಕೆಲಸವೂ ಆಗುತ್ತದೆ. ಚಿತ್ರದುರ್ಗ ಜಿಲ್ಲೆಯಲ್ಲಿ 2560 ಹಕ್ಕುಪತ್ರಗಳು ಬಾಕಿಯಿದ್ದು, 2150 ಹಕ್ಕುಪತ್ರಗಳನ್ನು ನೀಡಲಾಗುವುದೆಂದರು. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಹೊಸಪೇಟೆಯಲ್ಲಿ ನಡೆಯುವ ಕಾಂಗ್ರೆಸ್ ಸರ್ಕಾರದ ಎರಡು ವರ್ಷಗಳ ಸಾಧನಾ ಸಮಾವೇಶ ಕುರಿತು ಮಾತನಾಡಿದರು.

ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ, ಕೆ.ಪಿ.ಸಿ.ಸಿ. ಪ್ರಧಾನ ಕಾರ್ಯದರ್ಶಿಹನುಮಲಿಷಣ್ಮುಖಪ್ಪ,ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಕೆ.ಪಿ.ಸಂಪತ್‌ಕುಮಾರ್, ಡಿ.ಎನ್.ಮೈಲಾರಪ್ಪ, ಉಪಾಧ್ಯಕ್ಷ ಜಿ.ಎಸ್.ಕುಮಾರ್‌ಗೌಡ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತಾನಂದಿನಿಗೌಡ, ವಿಧಾನಪರಿಷತ್ ಮಾಜಿ ಸದಸ್ಯೆ ಜಯಮ್ಮ ಬಾಲರಾಜ್, ಯೂತ್ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕಾರೆಹಳ್ಳಿ ಉಲ್ಲಾಸ್, ಯು.ಲಕ್ಷ್ಮಿಕಾಂತ್, ಎಸ್ಸಿಸೆಲ್ ವಿಭಾಗದ ಅಧ್ಯಕ್ಷ ಎಸ್.ಜಯಣ್ಣ, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಅನಂತ್, ಎಸ್ಟಿಸೆಲ್ ವಿಭಾಗದ ಅಧ್ಯಕ್ಷ ಮಂಜುನಾಥ್, ಜಿ.ವಿ.ಮಧುಗೌಡ, ಮಹಡಿ ಶಿವಮೂರ್ತಿ, ಅಲ್ಲಾಭಕ್ಷಿ, ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಮುನಿರಾ ಎ.ಮಕಾಂದಾರ್, ಗ್ಯಾರೆಂಟಿ ಅನುಷ್ಠಾನಗಳ ಸಮಿತಿ ಜಿಲ್ಲಾಧ್ಯಕ್ಷ ಆರ್.ಶಿವಣ್ಣ ವೇದಿಕೆಯಲ್ಲಿದ್ದರು.

ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್.ಪ್ರಕಾಶ್ ಸೇರಿದಂತೆ ವಿವಿಧ ಮುಂಚೂಣಿ ಘಟಕಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ್ದರು.

## 50ವರ್ಷದಲ್ಲಿ ಸಾವಿರಾರು ಉಚಿತ ಹೆರಿಗೆ ಮಾಡಿಸುವಲ್ಲಿ ಸಫಲರಾದ ತಳುಕಿನ ತಿಮ್ಮಕ್ಕಗೆ ಶಾರದಾಶ್ರಮದ ನೆರವು

» **ಚಳ್ಳಕೆರೆ**

ತಾಲ್ಲೂಕಿನ ತಳಕು ಹೋಬಳಿಯ ಕಾಲುವೇಹಳ್ಳಿ ಗ್ರಾಮದಲ್ಲಿ ಕಳೆದ ಹಲವಾರು ವರ್ಷಗಳಿಂದ ಗ್ರಾಮದ ಗರ್ಭಿಣಿ ಮಹಿಳೆಯರಿಗೆ ಹೆರಿಗೆ ಮಾಡಿಸುವ ಮೂಲಕ ಕರ್ತವ್ಯ ನಿಷ್ಠೆ ಮೆರೆದ ಗ್ರಾಮದ ಶತಾಯುಷಿ ತಳುಕಿನ ತಿಮ್ಮಕ್ಕ(103), ಇದೇ ಗ್ರಾಮದಲ್ಲಿ ದೇವರ ಎತ್ತುಗಳ ಪಾಲನೆ ಮಾಡುತ್ತಿರುವ ಪಾರ್ವತಮ್ಮ ಇವರ ನಿಸ್ವಾರ್ಥ ಸೇವೆಯನ್ನು ಶಾರದಾಶ್ರಮ ಭಕ್ತರು ಗುರುತಿಸಿ ಸನ್ಮಾನಿಸಿದರು.



3ಶತಾಯುಷಿ ತಳುಕಿನತಿಮ್ಮಕ್ಕಳಿಗೆ ಮನೆ ಹಾಗೂ ಮೂಲಸೌಲಭ್ಯವಿಲ್ಲದ ಬಗ್ಗೆ ವರದಿ ಗಮನಿಸಿದ ಚಳ್ಳಕೆರೆಯ ಶಾರದಾಶ್ರಮ ಭಕ್ತರು ಶುಕ್ರವಾರ ಗ್ರಾಮಕ್ಕೆ ತೆರಳಿ ತಳುಕಿನ ತಿಮ್ಮಕ್ಕಳಿಗೆ ಸ್ವಲ್ಪ ಹಣ, ಆಹಾರ ಪದಾರ್ಥಗಳೊಂದಿಗೆ ಉಚಿತವಾಗಿ ಕೆಲವೊಂದು ಸಾಮಾಗ್ರಿಗಳನ್ನು ನೀಡಿದ್ದಾರೆ. ಜೊತೆಯಲ್ಲೇ ದೇವರ ಎತ್ತುಗಳ ಪಾಲನೆಯಲ್ಲಿ ತೊಡಗಿರುವ ಪಾರ್ವತಮ್ಮ ಭೇಟಿಯಾಗಿ ಅವರ ಜಾನುವಾರುಗಳಿಗೆ ಉಚಿತವಾಗಿ ಒಂದು ಲೋಡ್ ಮೇವನ್ನು ಸಹ ನೀಡಿದ್ದಾರೆ. ಇದೇ ಸಂದರ್ಭದಲ್ಲಿ ತಳುಕಿನ ತಿಮ್ಮಕ್ಕಳ ಪಾಲನೆಯಲ್ಲಿರುವ ಪಾಲಕ್ಕಗಳನ್ನು ಸಹ ಗೌರವಿಸಲಾಯಿತು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ, ತಳುಕಿನತಿಮ್ಮಕ್ಕ, ಪಾರ್ವತಮ್ಮ ಹಾಗೂ ಪಾಲಕ್ಕರ ಸೇವೆಯನ್ನು ಗುರುತಿಸಿದ ಗೌರವಿಸಿದ ಶಾರದಾಶ್ರಮದ ಎಲ್ಲಾ ಪದಾಧಿಕಾರಿಗಳಿಗೆ, ಭಕ್ತರಿಗೆ ಅಭಿನಂದನೆ ಸಲ್ಲಿಸಿದರು.

ತಳುಕಿನತಿಮ್ಮಕ್ಕ ಇದೇ ಗ್ರಾಮದಲ್ಲಿ ಸುಮಾರು 50 ವರ್ಷಗಳ ಕಾಲ ನೂರಾರು ಹೆರಿಗೆ ಮಾಡಿಸುವ ಮೂಲಕ ಆ ಭಾಗದ ಮಹಿಳೆಯರ ಆಸರೆಯಾಗಿದ್ದರು. ಕಳೆದ ಸುಮಾರು 50 ವರ್ಷಗಳಿಂದ ಪ್ರಸೂತಿ ಕಾರ್ಯವನ್ನು ಯಶಸ್ವಿಯಾಗಿ ಮಾಡಿದ ಇವರಿಗೆ ಈಗ ದಾನಿಗಳ ನೆರವು ಬೇಕಿದೆ. ಈ ಬಡ ಕುಟುಂಬಕ್ಕೆ ನೆರವು ನೀಡುವಲ್ಲಿ ಸಹಕಾರ ನೀಡಿದ್ದೀರಿ, ಗ್ರಾಮದ ಪರವಾಗಿ ಎಲ್ಲರನ್ನೂ ಅಭಿನಂದಿಸುವುದಾಗಿ ತಿಳಿಸಿದರು.

ಶುಭಸೋಮಶೇಖರ್, ಎಂ.ಯತೀಶ್, ಮೋಹಿನಿಸತ್ಯನಾರಾಯಣ, ರುಕ್ಮಿಣಿ, ರಾಘವೇಂದ್ರ, ನೀಲಕಂಠಶೆಟ್ಟಿ, ರಂಗಸ್ವಾಮಿ, ಪಾಲಣ್ಣ, ಕೆ.ಜಿ.ರಾಮಣ್ಣ, ಜಿ.ಕಾಂತಣ್ಣ, ಕೆ.ಒ.ಪಾಲಣ್ಣ, ಲೋಕೇಶ್‌ಪೂಜಾರಿ ಮುಂತಾದವರು ಉಪಸ್ಥಿತರಿದ್ದರು.

## ನೇತ್ರದಾನ ಸಾವಿನಲ್ಲೂ ಸಾರ್ಥಕತೆ ಮೆರೆದ ಗಂಗಮ್ಮ



» **ಚಿತ್ರದುರ್ಗ**

ಹಿರಿಯೂರು ತಹಶೀಲ್ದಾರರ ಕಚೇರಿ ದ್ವಿತೀಯ ದರ್ಜೆ ಸಹಾಯಕ ಶ್ರೀನಿವಾಸ ರೆಡ್ಡಿ ಅವರ ತಾಯಿ ಟಿ.ಗಂಗಮ್ಮ (75) ಶುಕ್ರವಾರ ಅಕಾಲಿಕ ಮರಣ ಹೊಂದಿದ್ದು, ಕುಟುಂಬಸ್ಥರ ಸ್ವ ಇಚ್ಛೆಯಂತೆ ಅವರ ಎರಡು ಕಣ್ಣುಗಳನ್ನು ದಾನ ಮಾಡಲಾಗಿದೆ. ಕುಟುಂಬಸ್ಥರ ಸ್ವ ಇಚ್ಛೆಯಂತೆ ಅವರ ಎರಡು ಕಣ್ಣುಗಳನ್ನು ದಾನ ಮಾಡಲು ನಿರ್ಧರಿಸಿ ಶ್ರೀ ಬಸವ ಜ್ಯೋತಿ ಐ ಬ್ಯಾಂಕ್‌ಗೆ ಸಂಪರ್ಕ ಸಾಧಿಸಿ ಡಾ. ವೆನಿಲ್ಲಾ ಅವರ ಸಹಯೋಗದೊಂದಿಗೆ ದಿವಂಗತರ ಕಣ್ಣುಗಳು ಅಂಧರ ಬಾಳಿಗೆ ಬೆಳಕು ನೀಡುವಂತಹ ಮಹತ್ತರ ಕಾರ್ಯ ಮಾಡಿರುವುದು ಶ್ಲಾಘನೀಯ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಹಿರಿಯೂರು ಶಾಖೆಯ ಅಧ್ಯಕ್ಷ ಆರ್.ರಮೇಶ್ ಮೆಚ್ಚುಗೆ ವ್ಯಕ್ತಪಡಿಸಿ, ದಿವಂಗತರ ಕುಟುಂಬದವರಿಗೆ ಸಾಂತ್ವನ ನೀಡುವ ಮೂಲಕ ಧೈರ್ಯ ತುಂಬಿದರು. ಈ ಸಂದರ್ಭದಲ್ಲಿ ಹಿರಿಯೂರು ತಹಶೀಲ್ದಾರ್ ರಾಜೇಶ್ ಕುಮಾರ್ ಕುಟುಂಬಸ್ಥರಿಗೆ ಪ್ರಶಂಸಾ ಪತ್ರ ವಿತರಿಸಿದರು. ಹಿರಿಯೂರು ಶಾಖೆಯ ಗೌರವಾಧ್ಯಕ್ಷ ತಿಪ್ಪೇಸ್ವಾಮಿ, ಐ ಬ್ಯಾಂಕ್ ನಿರ್ದೇಶಕರಾದ ವೀರೇಶ್, ವೆಂಕಟಸ್ವಾಮಿ ಹಾಗೂ ದಿವಂಗತರ ಸುಪುತ್ರರಾದ ಶ್ರೀನಿವಾಸ ರೆಡ್ಡಿ ಅವರು ತಮ್ಮ ತಾಯಿಯ ಆಗಲಿಕೆಯ ನೋವಿನಲ್ಲೂ ಸಹ ಈ ಮಹತ್ಕಾರ್ಯದಲ್ಲಿ ಭಾಗಿಯಾಗಿದ್ದರು.

## ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ಹಕ್ಕುಪತ್ರ ವಿತರಿಸಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

» **ದಾವಣಗೆರೆ**

ರಾಜ್ಯ ಸರ್ಕಾರ ಕೈಗೊಂಡಿರುವ ಕಂದಾಯ ಗ್ರಾಮ, ದರಖಾಸ್ತು, ಪೋಡಿಮುಕ್ತ ಅಭಿಯಾನ, ಪೌತಿಖಾತೆ, ಇನ್ನಿತರೆ ಹಲವು ಯೋಜನೆಗಳನ್ನು ರೂಪಿಸಿದ್ದು, ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ಹಕ್ಕುಪತ್ರ ವಿತರಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸೂಚಿಸಿದರು. ಜಿಲ್ಲೆಯ ಹರಿಹರ ತಾಲ್ಲೂಕಿನ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ಹಕ್ಕುಪತ್ರ ವಿತರಣೆ ಕುರಿತು ಆಯೋಜಿಸಲಾಗಿದ್ದ ಸಭೆಯಲ್ಲಿ ಅವರು ಮಾತನಾಡಿದರು.

ಹರಿಹರ ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟಾರೆ 34 ಗ್ರಾಮ ಪಂಚಾಯತಿಗಳನ್ನು ಒಳಗೊಂಡಿದ್ದು, ಈ ಪೈಕಿ 136 ಕಂದಾಯ ಗ್ರಾಮಗಳ ಫಲಾನುಭವಿಗಳಿಗೆ ಹಕ್ಕುಪತ್ರ ನೀಡಲು ಆಯ್ಕೆ ಮಾಡಲಾಗಿದೆ. ದರಖಾಸ್ತು ಪೋಡಿ ಅಭಿಯಾನದಡಿ 147 ಫಲಾನುಭವಿಗಳು, ಪೋಡಿಮುಕ್ತ ಗ್ರಾಮಗಳ ಪೈಕಿ 42 ಗ್ರಾಮಗಳಲ್ಲಿ 692 ಫಲಾನುಭವಿಗಳನ್ನು ಗುರುತಿಸಲಾಗಿದೆ. ಹಾಗೆಯೇ ತಾಲ್ಲೂಕು ವ್ಯಾಪ್ತಿಯಲ್ಲಿ ಪೌತಿಖಾತೆ ಅಭಿಯಾನದಡಿ ಆಧಾರ್ ಜೋಡಣೆ ಕಾರ್ಯದ ವೇಳೆ 4 ಸಾವಿರಕ್ಕೂ ಹೆಚ್ಚು ಪಹಣಿಗಳು ಮರಣ ಹೊಂದಿದವರ ಹೆಸರಿನಲ್ಲಿರುವುದು ಕಂಡು ಬಂದಿದೆ. ಅವುಗಳಲ್ಲಿ 132 ಫಲಾನುಭವಿಗಳಿಗೆ ಫಾರಂ 10ರಡಿ ಈಗಾಗಲೇ ಅಧಿಕೃತವಾಗಿ ಫೌತಿಖಾತೆ ನೀಡಲಾಗಿದೆ.



**ಪ್ರಮುಖ ಸುದ್ದಿ**

# ಮಲೇರಿಯಾ, ಡೆಂಗ್ಯೂ ತಡೆಗೆ ನಾಗರೀಕರ ಜವಾಬ್ದಾರಿ ಮುಖ್ಯ

» **ದಾವಣಗೆರೆ**

ಸೊಳ್ಳೆಗಳನ್ನು ನಿಯಂತ್ರಿಸುವುದರಿಂದ ಮಲೇರಿಯಾ, ಡೆಂಗ್ಯೂ ರೋಗಗಳನ್ನು ತಡೆಗಟ್ಟಬಹುದು. ಇದಕ್ಕೆ ಎಲ್ಲರ ಸಹಕಾರ ಅತ್ಯಗತ್ಯ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದರು.



ಶುಕ್ರವಾರ(ಮೇ.16)ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಿದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನೀರು ನಿಲ್ಲದಂತೆ ನಿಗಾವಹಿಸಿ ಪೈಪ್ ಲೈನ್ ಹೊಡೆದ ತಕ್ಷಣ ದುರಸ್ಥಿಗೊಳಿಸಿ ನೀರು ಶೇಖರಣೆಯಾದಂತೆ ನೋಡಿಕೊಳ್ಳಬೇಕು. ಇದರಿಂದ ಸೊಳ್ಳೆಗಳು ಉತ್ಪತ್ತಿಯಾಗಿ ಡೆಂಗ್ಯೂ ರೋಗ ಹರಡುತ್ತವೆ. ಈಗ ಮಳೆಗಾಲ ಆರಂಭವಾಗಿರುವುದರಿಂದ ತಗ್ಗು ಪ್ರದೇಶಗಳಲ್ಲಿ ಮತ್ತು ಬಯಲಿನಲ್ಲಿ ಬಿಸಾಡಿದ ಟೈರುಗಳಲ್ಲಿ, ಪ್ಲಾಸ್ಟಿಕ್ ಲೋಟಗಳಲ್ಲಿ, ಮನೆಯ ಸುತ್ತ–ಮುತ್ತ ತ್ಯಾಜ್ಯ ವಸ್ತುಗಳನ್ನು ಎಲ್ಲೆಂದರಲ್ಲಿ ಬಿಸಾಕುವುದರಿಂದ ನೀರು ನಿಂತು ಇಂತಹ ಖಾಯಿಲೆಗಳು ಹರಡುತ್ತವೆ. ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಟ್ಟು, ಸೂಕ್ತ ಸ್ಥಳದಲ್ಲಿ ವಿಲೇವಾರಿ ಮಾಡಬೇಕೆಂದು ಹೇಳಿದರು.

ಸಾರ್ವಜನಿಕರು ಸ್ವಯಂ ರಕ್ಷಣಾ ವಿಧಾನಗಳನ್ನು ಅನುಸರಿಸಬೇಕು. ಮಕ್ಕಳು, ವೃದ್ಧರು, ರಾತ್ರಿ ವೇಳೆಯಲ್ಲಿ ಅಲ್ಲದೇ ಹಗಲಿನಲ್ಲಿ ಸಹ ಸೊಳ್ಳೆ ಪರದೆಯನ್ನು ಬಳಸಬೇಕು. ಜೊತೆಗೆ ಆ□□ಔ□□ಗಳನ್ನು, ಬೇವಿನ ಸೊಪ್ಪಿನ ಹೊಗೆ ಹಾಕಬೇಕು. ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಜೊತೆಗೆ ಮನೆಯಲ್ಲಿರುವ ನೆಲದತೊಟ್ಟಿ ಮತ್ತು ಡ್ರಂಗಳಲ್ಲಿ ಶೇಖರಣೆಯಾಗಿರುವ ನೀರುನ್ನು ತೆಗೆದು ತೊಳೆಯಬೇಕು. ಇದರಿಂದ ಸೊಳ್ಳೆಗಳ ಉತ್ಪತ್ತಿ ತಡೆಗಟ್ಟಬಹುದು. ಎಲ್ಲಾ ಹಳ್ಳಿಗಳಲ್ಲಿ ನೀರು ಸರಾಗವಾಗಿ ಹರಿಯುವಂತೆ ನೋಡಿಕೊಳ್ಳಬೇಕು. ಘನತ್ಯಾಜ್ಯ ವಸ್ತುಗಳನ್ನು ಸೂಕ್ತ ಸ್ಥಳಗಳಲ್ಲಿ ವಿಲೇವಾರಿ ಮಾಡಬೇಕು. ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಿ ಸೊಳ್ಳೆಗಳ ನಿಯಂತ್ರಣವನ್ನು ನಾವೆಲ್ಲರೂ ಸೇರಿ ಮಾಡೋಣ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಡೆಂಗೀ ದಿನ 2025ರ "ಡೆಂಗೀ ಸೋಲಿಸಲು ಹೆಜ್ಜೆಗಳು ಪರಿಶೀಲಿಸಿ, ಸ್ವಚ್ಛಗೊಳಿಸಿ ಮುಚ್ಚಿಡಿ" ಎಂಬ ಘೋಷವಾಕ್ಯ ಒಳಗೊಂಡ ಕರಪತ್ರಗಳನ್ನು ಬಿಡುಗಡೆಗೊಳಿಸಲಾಯಿತು. ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವಿಜಯಕುಮಾರ್ ಸಂತೋಷ್, ಆ□□ಸಿಹೆಚ್ ರೇಣುಕರಾಧ್ಯ, ಜಿಲ್ಲಾ ಸರ್ಜನ್ ಡಾ:ನಾಗೇಂದ್ರಪ್ಪ, ಜಿಲ್ಲಾ ಆರೋಗ್ಯಾಧಿಕಾರಿ ಡಾ: ಷಣ್ಮುಖಪ್ಪ ಉಪಸ್ಥಿತರಿದ್ದರು.

# ಸ್ವ-ಸಹಾಯ ಸಂಘಗಳು ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಸೌಲಭ್ಯ: ಸಂಸದೆ ಪ್ರಭಾ ಮಲ್ಲಿಕಾರ್ಜುನ್

» ದಾವಣಗೆರೆ

ದಾವಣಗೆರೆ ಜಿಲ್ಲೆಯಲ್ಲಿ ಸ್ವ-ಸಹಾಯ ಸಂಘಗಳು ತಯಾರಿಸಿದ ಉತ್ಪನಗಳಿಗೆ ಮಾರುಕಟ್ಟೆ ಸೌಲಭ್ಯ ಕಲ್ಪಿಸಲಾಗುತ್ತದೆ ಎಂದು ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಜಿಲ್ಲಾ ಪಂಚಾಯತ್, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ, ಕೃಷಿ ಇಲಾಖೆ, ಕೌಶಲ್ಯ ಅಭಿವೃದ್ಧಿ ಇಲಾಖೆ, ಹಾಗೂ ತೋಟಗಾರಿಕೆ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಪಿಎಂಎಫ್‌ಎಂಇ ಫಲಾನುಭವಿಗಳಿಗೆ ಸಮಾಲೋಚನಾ ಸಮಾರಂಭ ಮತ್ತು ಮಾರುಕಟ್ಟೆ ನೆರವು ಹಾಗೂ ವ್ಯಾಪಾರ ಅಭಿವೃದ್ದಿ ಕಾರ್ಯಾಗಾರವನ್ನು ಶುಕ್ರವಾರ ಗ್ಲಾಸ್ ಹೌಸ್ ನಲ್ಲಿ ಉದ್ಘಾಟಿಸಿ ಮಾತನಾಡಿದರು.

ರಾಜ್ಯದಲ್ಲಿ ಪ್ರಥಮ ಬಾರಿಗೆ ಜಿಲ್ಲೆಯಲ್ಲಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಮುದ್ರಾ ಯೋಜನೆಯಡಿ ಎರಡು ವಿಧಗಳಿವೆ. ಶಿಶು ಮತ್ತು ತರುಣ, ಸ್ವಸಹಾಯ ಸಂಘದವರು ಇದರ ಉಪಯೋಗವನ್ನು ಪಡೆದುಕೊಳ್ಳಬೇಕು. ಸ್ವಸಹಾಯ ಸಂಘದವರು ತಯಾರಿಸಿರುವ ಬೆಡ್‌ಶೀಟ್ ಹಾಗೂ ಶಾಲುಗಳನ್ನು ಹಾಸ್ಟೆಲ್ ಹಾಗೂ ಸಿ.ಜಿ.ಆಸ್ಪತ್ರೆಯವರು ಖರೀದಿ ಮಾಡಬೇಕು. ಸುಮಾರು 1,20,227 ಜನ ಸ್ವಸಹಾಯ ಸಂಘದ ಮಹಿಳಾ ಸದಸ್ಯರಿದ್ದು ನೀವು ಇನ್ನೂ ಹೆಚ್ಚಿನ ರೀತಿಯಲ್ಲಿ ಉತ್ಪಾದನೆ ಮಾಡಿ ಮಾರಾಟ ಮಾಡಬೇಕು. ನಗರದ ಗಾಜಿನ ಮನೆಯ ಹತ್ತಿರ ಒಂದು ಖಾಯಂ ಮಾರುಕಟ್ಟೆ ಮಳಿಗೆ ತೆರೆಯಬೇಕು. ಕೋಡುಬಳೆ, ನಿಪ್ಪಟ್ಟುಗಳಿಗೆ ಒಳ್ಳೆಯ ಪ್ಯಾಕೇಜ್ ನೀಡಬೇಕು.



ವಿದ್ಯಾರ್ಥಿ ನಿಲಯಗಳಿಗಾಗಿ ಉತ್ಪನ್ನ ಖರೀದಿಸಿದರೆ ಸಂಘಗಳಿಗೆ ನೆರವು ನೀಡಿದಂತೆ ಆಗುತ್ತದೆ. ವಿವಿಧ ಆಹಾರೋತ್ಪನ್ನಗಳನ್ನು ಸಮಾಜ ಕಲ್ಯಾಣ ಇಲಾಖೆಯಿಂದ ತಾಲ್ಲೂಕಿನಲ್ಲಿ ನಡೆಸುತ್ತಿರುವ ವಿದ್ಯಾರ್ಥಿ ನಿಲಯಗಳಿಗಾಗಿ ಕಡ್ಡಾಯವಾಗಿ ಖರೀದಿಸಿದಲ್ಲಿ ಸಂಘದವರಿಗೆ ನೆರವು ದೊರೆಯಬಹುದು. ನಮ್ಮ ಸಂಘದವರು ತಯಾರಿಸುವ ಯಾವುದೇ ವಸ್ತುಗಳನ್ನು ಸಭೆ, ಸಮಾರಂಭಗಳಿಗಾಗಿ ಗ್ರಾಮ ಪಂಚಾಯಿತಿಗಳು ಖರೀದಿಸಬೇಕು ಎಂದರು.

ಮಹಿಳಾ ಸ್ವಸಹಾಯ ಸದಸ್ಯರು, ಸಾಂಬಾರಪುಡಿ, ಚಟ್ನಿಪುಡಿ, ಉಪ್ಪಿನಕಾಯಿ, ಹಪ್ಪಳ, ಸಂಡಿಗೆ, ಸಾವಯವ ಬೆಲ್ಲ, ಸಿರಿಧಾನ್ಯದ ಉತ್ಪನ್ನಗಳು, ಅಲ್ಲದೇ ದಿನಬಳಕೆಯ ಅಗರಬತ್ತಿ, ಕರಕುಶಲ ವಸ್ತುಗಳು, ಸ್ಪಂಜ್ ಮಾಲೆಗಳು, ನೆಲಹಾಸುಗಳು, ಬಣ್ಣಬಣ್ಣದ ಶಾಲುಗಳು, ಮಣ್ಣಿನಿಂದ ತಯಾರಿಸಿದ ಉತ್ಪನ್ನಗಳ ಜೊತೆಗೆ ಇನ್ನೂ ಹಲವು ಉತ್ಪನ್ನಗಳ ಪ್ರದರ್ಶನ ಮತ್ತು ಮರಾಟ ಮಳಿಗೆಗಳನ್ನು ತೆರೆಯಲಾಯಿತು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುರೇಶ್.ಬಿ.ಇಟ್ನಾಳ್ ಮಾತನಾಡಿ ಜಿಲ್ಲೆಯಲ್ಲಿ ಪಿಎಂಎಫ್‌ಎಂಎಸ್ ಸ್ಕಿಂನಲ್ಲಿ 184 ಜನ ಫಲಾನುಭವಿಗಳು ಇದರ ಪ್ರಯೋಜ ಪಡೆದಿದ್ದಾರೆ.1436 ಲಕ್ಷ ಸಾಲವನ್ನು ನೀಡಲಾಗಿದ್ದು, ಇದಕ್ಕೆ ಸಬ್ಸಿಡಿ ನೀಡಲಾಗಿದೆ. ಇದರಲ್ಲಿ 68 ಜನ ರೊಟ್ಟಿ ಮಾಡುತ್ತಿದ್ದು, 36 ಜನ ಉಪ್ಪಿನಕಾಯಿ ತಯಾರು, 30 ಜನ ಮಿಲೆಟ್ಸ್ ತಯಾರು ಮಾಡುತ್ತಿದ್ದು, ಇನ್ನೂ ಕೆಲವರು ವಿವಿಧ ರೀತಿಯ ಉತ್ಪನ್ನಗಳನ್ನು ತಯಾರಿಸುತ್ತಿದ್ದಾರೆ.

ನಲ್ ಜಲ್ ಮಿತ್ರ ಕಾರ್ಯಕ್ರಮ ಜಲ್ ಜೀವನ್ ಮಿಷನ್ ಯೋಜನೆಯಡಿ ಗ್ರಾಮ ಪಂಚಾಯತಿಯಲ್ಲಿ ಪ್ರತಿ ಮನೆಗಳಿಗೆ ಅಳವಡಿಸಲಾದ 24 ಗಂಟೆ ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ ಪ್ರತಿ ಪಂಚಾಯತಿಯಿಂದ ಇಬ್ಬರು ಮಹಿಳಾ ಸದಸ್ಯರನ್ನು ನಿರ್ವಹಣಾ ಸಿಬ್ಬಂದಿಯಾಗಿ ಆಯ್ಕೆ ಮಾಡಿ 50 ಮಹಿಳಾ ಸದಸ್ಯರಿಗೆ 17 ದಿನಗಳ ಕಾಲ ತರಬೇತಿ ಮತ್ತು 23 ದಿನಗಳ ಪ್ರಾಯೋಗಿಕ ಸೇರಿ ಒಟ್ಟು 40 ದಿನಗಳ ಕಾಲ ತರಬೇತಿಯನ್ನು ನೀಡಲಾಗಿದೆ.

ತರಬೇತಿ ಪಡೆದ ಅಭ್ಯರ್ಥಿಗಳಿಗೆ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಲು ಪೂರಕವಾದ ಟೂಲ್ ಕಿಟ್ ವಿತರಣೆ ಮಾಡಲಾಯಿತು.

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಕೌಸರ್ ರೇಷ್ಮಾ, ತೋಟಗಾರಿಕೆ ಉಪನಿರ್ದೇಶಕರಾದ ರಾಘವೇಂದ್ರ ಪ್ರಸಾದ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀನಿವಾಸ್ ಚಿಂತಾಲ್ ಉಪಸ್ಥಿತರಿದ್ದರು.

# ಕಾರ್ಮಿಕರ ಸಮೂಹಕ್ಕೆ ಯಾವುದೇ ಸೌಲಭ್ಯ ನೀಡದೆ ವಂಚಿಸುತ್ತಿರುವ ಸರ್ಕಾರದ ವಿರುದ್ದ 20ರಂದು ಪ್ರತಿಭಟನೆ

» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ಕಾರ್ಮಿಕರ ಸಂಘಟನೆಗಳು ಕೇಂದ್ರ ಹಾಗೂ ರಾಜ್ಯಸರ್ಕಾರಗಳ ವಿರುದ್ದ ತಮ್ಮ ನ್ಯಾಯಯುತ ಬೇಡಿಕೆಗಳಿಗಾಗಿ ಹೋರಾಟ ನಡೆಸುತ್ತಿದ್ದರೂ ಯಾವುದೇ ಸೌಲಭ್ಯ ನೀಡದೆ ಸರ್ಕಾರಗಳು ಕಾರ್ಮಿಕ ಸಮೂಹವನ್ನು ವಂಚಿಸುತ್ತಿವೆ. ಆದ್ದರಿಂದ ರಾಜ್ಯ ಮಟ್ಟದಲ್ಲಿ ಮೇ.20ರಂದು ಬೇಡಿಕೆ ಈಡೇರಿಕೆಗಾಗಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಐಟಿಯುಸಿ ರಾಜ್ಯಸಂಚಾಲಕ ಸಿ.ವೈ.ಶಿವರುದ್ರಪ್ಪ ತಿಳಿಸಿದರು.




ಅವರು, ಶುಕ್ರವಾರ ವಾಲ್ಮೀಕಿ ಕಲ್ಯಾಣಮಂಟಪದಲ್ಲಿ 44ನೇ ರೈತಕಾರ್ಮಿಕರ ಹುತಾತ್ಮ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ರಾಜ್ಯದಲ್ಲಿ ಕಾರ್ಮಿಕರ ಸಂಘಟನೆಗಳ ಹೋರಾಟಗಳನ್ನು ಹತ್ತಿಕ್ಕುವ ಪ್ರಯತ್ನವನ್ನು ಸರ್ಕಾರ ಮಾಡುತ್ತಿದೆ. ಅಂಗನವಾಡಿ, ಆಶಾಕಾರ್ಯಕರ್ತೆಯರು ಹಾಗೂ ಬಿಸಿಯೂಟ ತಯಾರಿಕರಿಗೆ ಕನಿಷ್ಠ ವೇತನ ಹಾಗೂ ಮೂಲಭೂತ ಸೌಕರ್ಯಗಳನ್ನು ನೀಡುವಂತೆ ಪ್ರತಿಭಟನೆ ನಡೆಸಿದರೂ ಸರ್ಕಾರ ಯಾವುದೇ ಬೇಡಿಕೆಗಳನ್ನು ಈಡೇರಿಸಲಿಲ್ಲ. ಕಾರ್ಮಿಕರ ಸಮೂಹ ಸರ್ಕಾರದ ನೀತಿಯಿಂದ ಸಂಕಷ್ಟಗಳನ್ನು ಎದುರಿಸುತ್ತಿದ್ದು ಮೇ.20ರ ಬೃಹತ್ ಪ್ರತಿಭಟನೆ ಕಾರ್ಮಿಕರ ಪಾಲಿಗೆ ವಿಶೇಷ ಶಕ್ತಿತುಂಬುವ ಪ್ರತಿಭಟನೆಯಾಗಲಿದೆ ಎಂದರು.

ಪಿ.ತಿಪ್ಪೇರುದ್ರಪ್ಪ ಧ್ವಜಾರೋಹಣ ನೇರವೇರಿಸಿ ಮಾತನಾಡಿ, ಕಾರ್ಮಿಕರ ಬಗ್ಗೆ ಯಾವ ಸರ್ಕಾರ ಅಲಕ್ಷ್ಯತಾಳುತ್ತದೆಯೋ ಅಂತಹ ಸರ್ಕಾರಗಳನ್ನು ಕಿತ್ತೊಗೆಯುವ ಸಂಕಲ್ಪವನ್ನು ಕಾರ್ಮಿಕರು ಮಾಡಬೇಕೆಂದರು.

ಎಲ್ಲರನ್ನೂ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದ ಸಿಪಿಐ ತಾಲ್ಲೂಕು ಕಾರ್ಯದರ್ಶಿ ದೊಡ್ಡ ಉಳ್ಳಾರ್ತಿಕರಿಯಣ್ಣ, ದಿನದ 24ಗಂಟೆಗಳ ಕಾಲ ಕಾರ್ಯನಿರ್ವಹಿಸುವ ಕಾರ್ಮಿಕರಿಗೆ ಅಂಗನವಾಡಿ, ಆಶಾ, ಬಿಸಿಯೂಟ ಕಾರ್ಯಕರ್ತೆಯರಿಗೆ ಸೌಲಭ್ಯ ಹಾಗೂ ವೇತನ ನೀಡಲು ಸರ್ಕಾರದಲ್ಲಿ ಹಣವಿಲ್ಲವೆನ್ನುತ್ತಾರೆ. ಆದರೆ, ಇತ್ತೀಚೆಗೆತಾನೇ ರಾಜ್ಯದಲ್ಲಿ ಮುಖ್ಯಮಂತ್ರಿ, ಮಂತ್ರಿ, ಶಾಸಕರ ವೇತನವನ್ನು ದುಪ್ಪಟ್ಟು ಏರಿಸಲಾಗಿದೆ. ಇದಕ್ಕೆ ರಾಜ್ಯಸರ್ಕಾರ ಸ್ಪಷ್ಟನೆ ನೀಡಬೇಕೆಂದರು.

ತಾಲ್ಲೂಕು ಕಾರ್ಯದರ್ಶಿ ಜಾಫರ್‌ಶರೀಫ್, ಹಿರಿಯೂರು ಕಾರ್ಯದರ್ಶಿ ಎಸ್.ಸಿ.ಕುಮಾರ್, ಎಂ.ಆರ್.ಮಂಜಣ್ಣ, ಕಾರ್ಮಿಕ ಮುಖಂಡ ವೆಂಕಟೇಶ್‌ರೆಡ್ಡಿ,ಹನುಮಂತಪ್ಪ,ಎಲೆತಿಪ್ಪೇಸ್ವಾಮಿ, ಅಂಗನವಾಡಿ ಕಾರ್ಯಕರ್ತೆಯರ ಫೆಡರೇಷನ್ ಅಧ್ಯಕ್ಷೆ ಆರ್.ವೇದಾವತಿ, ಪದ್ಮಮ್ಮ, ಪದ್ಮಕ್ಕ, ವಿಶಾಲಾಕ್ಷಮ್ಮ, ಜಯಲಕ್ಷ್ಮಿ, ಕೆಂಚಮ್ಮ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಜಾಗತಿಕ ಪ್ರವೇಶ ಜಾಗೃತಿ ದಿನ



» ದಾವಣಗೆರೆ

ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ದಿವ್ಯಾಂಗ ವ್ಯಕ್ತಿಗಳ ಸಬಲೀಕರಣ ಇಲಾಖೆ ವತಿಯಿಂದ ಬೌದ್ಧಿಕ ವಿಕಲಚೇತನ ವ್ಯಕ್ತಿಗಳ ಸಬಲೀಕರಣ ರಾಷ್ಟ್ರೀಯ ಸಂಸ್ಥೆಯ ಆಡಳಿತಾತ್ಮಕ ನಿಯಂತ್ರಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಯೋಜಿತ ಪ್ರಾದೇಶಿಕ ಕೇಂದ್ರ ಆವರಣದಲ್ಲಿ ಮೇ 15 ರಂದು ಆಯೋಜಿಸಲಾಗಿದ್ದ ಜಾಗತಿಕ ಪ್ರವೇಶ ಜಾಗೃತಿ ದಿನವನ್ನು ಸಿಆರ್‌ಸಿ ನಿರ್ದೇಶಕಿ ಮೀನಾಕ್ಷಿ ಉದ್ಘಾಟಿಸಿ ಮಾತಾನಾಡಿದರು. ಶಿಕ್ಷಣ, ಚಲನಶೀಲತೆ ಮತ್ತು ತಂತ್ರಜ್ಞಾನದಲ್ಲಿ ಪ್ರವೇಶ ಮತ್ತು ಒಳಗೊಳ್ಳುವ ಅಭ್ಯಾಸಗಳ ಬಗ್ಗೆ ತಿಳುವಳಿಕೆಯನ್ನು ಹೆಚ್ಚಿಸುವ ಮತ್ತು ಸಂವಾದವನ್ನು ಉತ್ತೇಜಿಸುವ ಗುರಿಯನ್ನು ಈ ಅಧಿವೇಶನ ಹೊಂದಿದೆ. ಈ ಸಂದರ್ಭದಲ್ಲಿ ಅವರು ಪ್ರವೇಶದ ಮಹತ್ವವನ್ನು ಎತ್ತಿ ತೋರಿಸಿದರು. ತಂತ್ರಜ್ಞಾನ ಮತ್ತು ಭೌತಿಕ ಸ್ಥಳಗಳು ಎಲ್ಲರಿಗೂ ಪ್ರವೇಶಿಸಬಹುದಾದ ಅಂತರ್ಗತ ಜಗತ್ತನ್ನು ಬೆಳೆಸುವುದು ಜಾಗೃತಿ ಕಾರ್ಯಕ್ರಮದ ಗುರಿಯಾಗಿದೆ ಎಂದು ಅವರು ಒತ್ತಿಹೇಳಿದರು. ಗ್ರಾಮ ಪುನರ್ವಸತಿ ಕಾರ್ಯಕರ್ತರು, ನಗರ ಪುನರ್ವಸತಿ ಕಾರ್ಯಕರ್ತರು, ವಿಶೇಷ ಶಿಕ್ಷಕರು ಮತ್ತು ಎಂಎಸ್‌ಡಬ್ಲ್ಯೂ ▯▯ ವಿದ್ಯಾರ್ಥಿಗಳಿಗೆ ಸೇರ್ಪಡೆ ಮತ್ತು ಪ್ರವೇಶಿಸಬಹುದಾದ ತಂತ್ರಜ್ಞಾನದ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ದಿವ್ಯಾಂಗ ವ್ಯಕ್ತಿಗಳು, ಮಕ್ಕಳು ಮತ್ತು ಹಿರಿಯ ನಾಗರಿಕರಿಗಾಗಿ ಸಂಯೋಜಿತ ಪ್ರಾದೇಶಿಕ ಕೇಂದ್ರದಲ್ಲಿ ಲಭ್ಯವಿರುವ ಸೌಲಭ್ಯಗಳು ಮತ್ತು ಸೇವೆಗಳ ಗರಿಷ್ಠ ಬಳಕೆಯನ್ನು ಅವರು ಪ್ರೋತ್ಸಾಹಿಸಿದರು. ಅವರು ವೈಜ್ಞಾನಿಕ ಅಧಿವೇಶನವನ್ನು ನಡೆಸಿದರು. ಅವರ ಅಧಿವೇಶನವು ಪ್ರವೇಶ ಮಾರ್ಗಸೂಚಿಗಳು, ಭೌತಿಕ ಮತ್ತು ಸಾಮಾಜಿಕ ಅಡೆತಡೆಗಳನ್ನು ಗುರುತಿಸುವುದು ಮತ್ತು ತಡೆರಹಿತ ಪರಿಸರವನ್ನು ಸೃಷ್ಟಿಸುವ ತಂತ್ರಗಳ ಮೇಲೆ ಕೇಂದ್ರೀಕರಿಸಿತು. ಜಿಲ್ಲಾ ದಿವ್ಯಾಂಗ ಕಲ್ಯಾಣ ಅಧಿಕಾರಿ ಡಾ. ಕೆ. ಕೆ. ಪ್ರಕಾಶ್, ಸಿಆರ್‌ಸಿ ಆಡಳಿತ ಅಧಿಕಾರಿ ವೈ. ಶ್ರೀನಾಥ್, ಸಿಆರ್‌ಸಿಯ ಕ್ಲಿನಿಕಲ್ ಸಹಾಯಕ ಸುರೇಂದ್ರ ಬಾಬು ಉಪಸ್ಥಿತರಿದ್ದರು.

## ಕಂದಾಯ ದಾಖಲೆಗಳನ್ನು ಡಿಜಿಟಲ್ ವ್ಯವಸ್ಥೆಯ ಮೂಲಕ ವಿತರಣೆ ಕಡ್ಡಾಯ: ಡಿಸಿ

**ದಾವಣಗೆರೆ:** ಭೂ ಸುರಕ್ಷಾ ಯೋಜನೆಯಡಿ ಅಭಿಲೇಖಾಲಯಗಳ ಕಂದಾಯ ದಾಖಲೆಗಳನ್ನು ಡಿಜಿಟಲ್ ಭೂ ದಾಖಲೆಗಳ ವಿತರಣೆ ಮೂಲಕ ಸಾರ್ವಜನಿಕರಿಗೆ ಒದಗಿಸುವ ವ್ಯವಸ್ಥೆಯನ್ನು ಜಾರಗೆ ತರುವ ಕುರಿತು ಕಂದಾಯ ಸಚಿವರ ನಿರ್ದೇಶನದಂತೆ, ದಾಖಲೆ ಶಾಖೆಯಲ್ಲಿರುವ ಕಂದಾಯ ದಾಖಲೆಗಳನ್ನು ಡಿಜಿಟಲ್ ವ್ಯವಸ್ಥೆಯ https://recordroom.karnataka.gov.in/service4 ಮೂಲಕವೇ ಸಾರ್ವಜನಿಕರಿಗೆ ವಿತರಿಸುವ ಉದ್ದೇಶದಿಂದ ಪ್ರಾರಂಭಿಕ ಹಂತದಲ್ಲಿ ಪ್ರತಿ ದಿನ ಕನಿಷ್ಠ 10 ಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಪಡೆದು, ಡಿಜಿಟಲ್ ಪ್ರತಿಗಳನ್ನು 2 ದಿನಗಳೊಳಗೆ ನೀಡಬೇಕು. ಒಂದು ವೇಳೇ ಕೋರಿರುವ ದಾಖಲೆಗಳು ಸ್ಕ್ಯಾನಿಂಗ್ ಆಗದೇ ಇದ್ದಲ್ಲಿ 7 ದಿನಗಳೊಳಗಾಗಿ ಸ್ಕ್ಯಾನಿಂಗ್ ಮಾಡಿ ಡಿಜಿಟಲ್ ಪ್ರತಿಯನ್ನೇ ವಿತರಿಸಲು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚಿಸಿದ್ದಾರೆ.ಪ್ರಾಯೋಗಿಕವಾಗಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಜಾರಿಗೊಳಿಸಲಾಗಿದ್ದು, 2025ರ ಜೂನ್ ನಂತರ ಕಡ್ಡಾಯವಾಗಿ ಕಂದಾಯ ದಾಖಲೆಗಳನ್ನು ಡಿಜಿಟಲ್ ಭೂ ದಾಖಲೆಗಳ ವಿತರಣೆ ಮೂಲಕ ಸಾರ್ವಜನಿಕರಿಗೆ ಒದಗಿಸುವುದರ ಜತೆಗೆ ಜಿಲ್ಲೆಯ ಎಲ್ಲಾ ಕಂದಾಯ ಕಚೇರಿಗಳ ಅಭಿಲೇಖಾಲಯಲ್ಲಿ ನೀಡುವ ದೃಡೀಕೃತ ನಕಲು ಪ್ರತಿಗಳನ್ನು ಕಡ್ಡಾಯವಾಗಿ ಕಂದಾಯ ದಾಖಲೆಗಳ ಗಣಕೀಕರಣ ತಂತ್ರಾಂಶದ ಮೂಲಕ ವಿತರಣೆ ಮಾಡಲಾಗುವುದು.

### ಫಾಸ್ಟ್ ನ್ಯೂಸ್

## ಅರ್ಜಿ ಆಹ್ವಾನ

» ದಾವಣಗೆರೆ

ವಿಕಲಚೇತನರ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಗೌರವಧನ ಆಧಾರದ ಮೇಲೆ ಕಾರ್ಯನಿರ್ವಹಿಸಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು 18 ರಿಂದ 45 ವರ್ಷ ವಯೋಮಾನದವರಾಗಿದ್ದು ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಹಾಗೂ ಕಂಪ್ಯೂಟರ್ ಜ್ಞಾನವುಳ್ಳ ವಿಕಲಚೇತನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಮೇ.31 ಕೊನೆಯ ದಿನವಾಗಿರುತ್ತದೆ. ದಾವಣಗೆರೆ ತಾಲ್ಲೂಕು ಆಲೂರ ಹಟ್ಟಿ (ಶ್ರೀರಾಮನಗರ), ಹುಚ್ಚವ್ವನಹಳ್ಳಿ, ಹರಿಹರ ತಾಲ್ಲೂಕು ಉಕ್ಕಡಗಾತ್ರಿ ಮತ್ತು ಚನ್ನಗಿರಿ ತಾಲ್ಲೂಕಿನ ವಡ್ನಾಳು ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ ವಾಸವಿರುವ ವಿಕಲಚೇತನ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಅರ್ಜಿ ಹಾಗೂ ಇತರೆ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿಗಳ ಕಛೇರಿ, ದೇವರಾಜ್ ಅರಸ್ ಬಡಾವಣೆ, 'ಬಿ' ಬ್ಲಾಕ್, ಶಿವಾಲಿ ಟಾಕೀಸ್ ಹತ್ತಿರ, ದಾವಣಗೆರೆ ದೂರವಾಣಿ:08192-263939 ಹಾಗೂ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು ದಾವಣಗೆರೆ ಮೊ:9590829024, ಚನ್ನಗಿರಿ ತಾಲ್ಲೂಕು ಮೊ:9945738141 ಮತ್ತು ಹರಿಹರ ತಾಲ್ಲೂಕು ಮೊ:9945458058 ಇವರನ್ನು ಸಂಪರ್ಕಿಸಲು ಇಲಾಖೆಯ ಅಧಿಕಾರಿ.ಡಾ.ಕೆ.ಕೆ ಪ್ರಕಾಶ್.ತಿಳಿಸಿದ್ದಾರೆ.

## ಹೈನುಗಾರಿಕೆ ತರಬೇತಿ

» ದಾವಣಗೆರೆ

ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಮೇ.19 ಮತ್ತು 20 ರಂದು ಆಧುನಿಕ ಹೈನುಗಾರಿಕೆ ತರಬೇತಿಯನ್ನು ಆಯೋಜಿಸಲಾಗಿದೆ. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಯು ದಾವಣಗೆರೆ ಜಿಲ್ಲೆಯ ರೈತರಿಗೆ ಮಾತ್ರ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192-233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

## ಇ-ಆಸ್ತಿ ನೀಡಲು ದಿನಾಂಕ ವಿಸ್ತರಣೆ

» ದಾವಣಗೆರೆ

ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಇ-ಆಸ್ತಿ ನೀಡಲು ಇನ್ನೂ ಬಾಕಿ ಇರುವುದರಿಂದ ಆಗಸ್ಟ್ 10 ರವರೆಗೆ ವಿಸ್ತರಿಸಲಾಗಿದೆ.

## ನಮ್ಮ ಮೆಟ್ರೋದಲ್ಲಿ ಮಾಜಿ ಸೈನಿಕರಿಗೆ ನೌಕರಿ

» ಚಿತ್ರದುರ್ಗ

ಬೆಂಗಳೂರು ಮೆಟ್ರೋ ರೈಲ್ ಕಾರ್ಪೋರೇಶನ್ ಲಿಮಿಟೆಡ್ ಅವರು 150 ಮೆಂಟೇನರ್ ಹುದ್ದೆಗಳಿಗಾಗಿ ಐ.ಟಿ.ಐ ಅಥವಾ ಎನ್.ಸಿ.ವಿ.ಟಿ/ಎನ್.ಸಿ.ಟಿ.ವಿ.ಟಿ/ಎನ್.ಎ.ಸಿ ಗೆ ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಮತ್ತು 50 ವರ್ಷದ ಒಳಗಿನ ಅರ್ಹ ಮಾಜಿ ಸೈನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಮೇ.22 ಅರ್ಜಿ ಸಲ್ಲಿಸಲು ಕೊನೆಯದಿನ.ವೇತನ25000-59060(ವಾರ್ಷಿಕ ಬಡ್ತಿ ಶೇ.3%) ಮತ್ತು ಬಿ.ಎಮ್.ಆರ್.ಸಿ.ಎಲ್ ನ, ಒ ಮತ್ತು ಎಮ್ ವಿಂಗ್‌ಗೆ ಲಭ್ಯವಿರುವ ಇತರೆ ಭತ್ಯೆಗಳು, ಹುದ್ದೆಗಳು 05 ವರ್ಷಗಳ ಅವಧಿಗೆ ಗುತ್ತಿಗೆ ಆಧಾರವಾಗಿದ್ದು, ನಂತರ ವೈಯಕ್ತಿಕ ಕಾರ್ಯಕ್ಷಮತೆಗೆ ಅನುಗುಣವಾಗಿ ಗುತ್ತಿಗೆ ಅವಧಿಯನ್ನು ವಿಸ್ತರಿಸಲಾಗುವುದು, ಅರ್ಜಿಯನ್ನು ವೆಬ್‌ಸೈಟ್ www.bmrc.co.in./careers ನಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ e-mail (helpdesk@bmrc.co.in) ಸಂಪರ್ಕಿಸಬಹುದು.

## ಪ್ರವೇಶಕ್ಕಾಗಿ ಅರ್ಜಿ

**ಚಿತ್ರದುರ್ಗ:** 2025-26ನೇ ಸಾಲಿನಲ್ಲಿ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಆನ್‌ಲೈನ್‌ನಲ್ಲಿ ಸೇವಾಸಿಂಧು ತಂತ್ರಾಂಶದ ಮೂಲಕ ಸಲ್ಲಿಸಬಹುದಾಗಿರುತ್ತದೆ. ಮೇ.30 ಅರ್ಜಿ ಸಲ್ಲಿಸಲು ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಶಾಲೆಗಳು ಹಾಗೂ ಅಲ್ಪಸಂಖ್ಯಾತರ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು. ಸೇವಾಸಿಂಧು ವೆಬ್‌ಸೈಟ್ https://sevasindhu.karnataka.gov.in ನಲ್ಲಿ ಅರ್ಜಿ ಸಲ್ಲಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ಪ್ರಮುಖ ಸುದ್ದಿ

# ವಿಶ್ವಡೆಂಗ್ಯೂ ಜಾಗೃತಿ ಜಾಥ; ಯಾವುದೇ ರೋಗತಡೆಯಲು ಆರೋಗ್ಯ ಇಲಾಖೆ ನಿಯಮಪಾಲನೆ ಕಡ್ಡಾಯ: ಆರ್.ಮಂಜುಳಾ ಪ್ರಸನ್ನಕುಮಾರ್

» ಚಳ್ಳಕೆರೆ

ಪ್ರತಿವರ್ಷವೂ ಆರೋಗ್ಯ ಇಲಾಖೆ ಸಾರ್ವಜನಿಕರಲ್ಲಿ ಯಾವುದೇ ರೋಗ ಹರಡದಂತೆ ಆರೋಗ್ಯವನ್ನು ಸದೃಢವಾಗಿ ಸಂರಕ್ಷಿಸಿಕೊಳ್ಳುವನಿಟ್ಟಿನಲ್ಲಿ ಜಾಗೃತಿಜಾಥವನ್ನು ಹಮ್ಮಿಕೊಂಡು ಸಾರ್ವಜನಿಕರಲ್ಲಿ ಆರೋಗ್ಯದ ಬಗ್ಗೆ ಹಚ್ಚು ಜಾಗೃತಿ ಮೂಡಿಸಲಾಗುತ್ತಿದೆ. ಆರೋಗ್ಯ ಇಲಾಖೆಯ ಕಾರ್ಯಕ್ಕೆ ಎಲ್ಲರೂ ಸಹಕರಿಸಬೇಕೆಂದು ನಗರಸಭೆ ಅಧ್ಯಕ್ಷೆ ಆರ್. ಮಂಜುಳಾ ತಿಳಿಸಿದರು.

ಅವರು, ಶುಕ್ರವಾರ ತಾಲ್ಲೂಕು ಆರೋಗ್ಯಾಧಿಕಾರಿ ಆವರಣದಲ್ಲಿ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಜಾಗೃತಿ ಜಾಥಕ್ಕೆ ಚಾಲನೆ ನೀಡಿ ಮಾತನಾಡಿದರು.. ಇತ್ತೀಚಿನ ದಿನಗಳಲ್ಲಿ ಡೆಂಗ್ಯೂರೋಗವೂ ಸಹ ಅಪಾಯಕಾರಿಯಾಗಿ ಪರಿಣಮಿಸಿದೆ. ಡೆಂಗ್ಯೂ ಪೀಡಿತರನ್ನು ಸಂರಕ್ಷಣೆ ಮಾಡುವ ಕೆಲಸವನ್ನು ಆರೋಗ್ಯ ಇಲಾಖೆ ಮಾಡುತ್ತಾ ಬಂದಿದೆ. ಡೆಂಗ್ಯೂವನ್ನು ತಡೆಯುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯ ಮಾನದಂಡಗಳನ್ನು ನಾವೆಲ್ಲರೂ ಪಾಲಿಸೋಣವೆಂದರು. ನಗರದ ಬಾಪೂಜಿ ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳು ಹಾಗೂ ಶಿಕ್ಷಕರ ಸಮೂಹ ಜಾಥದಲ್ಲಿ ಪಾಲ್ಗೊಂಡಿದ್ದರು.



ನಗರಸಭೆ ಉಪಾಧ್ಯಕ್ಷೆ ಕವಿತಾಬೋರಯ್ಯ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೆಂಕಟೇಶ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಅಮೃತರಾಜ್, ಬಿ.ಎಚ್.ಸಂಜಯ್, ರಾಜು, ರೇಷ್ಮಭಾನು, ಸುರಕ್ಷಣಾಧಿಕಾರಿಗಳಾ ಸೌಭಾಗ್ಯಮ್ಮ, ಅನಿತಾ, ಭಾಗ್ಯಮ್ಮ, ಸುಶೀಲ, ಸುವರ್ಣಮ್ಮ, ನಗರಸಭೆ ಆರೋಗ್ಯ ನಿರೀಕ್ಷಕ ಗಣೇಶ್, ಪ್ರಾಧ್ಯಾಪಕರಾದ ಉಮೇಶ್, ಡಾ.ಜೆ.ತಿಪ್ಪೇಸ್ವಾಮಿ, ನಂದಿನಿ, ಅಂಗನವಾಡಿ, ಆಶಾ ಕಾರ್ಯಕರ್ತರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T